ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಒಟ್ಟು ಪ್ರಶ್ನೆಗಳು – ೯೬**

**ಪಟ್ಟಿ – ೧೫**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೊಂಬತ್ತನೇ ಅಧಿವೇಶನ

**ಶುಕ್ರವಾರ, ದಿನಾಂಕ : ೧೭ನೇ ಜುಲೈ, ೨೦೧೫**

---

## ಸಮೂಹ – V

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು

೫. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೬. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

## ತಾಲ್ಲೂಕುಗಳಲ್ಲಿ ಪ್ರಯೋಗಾಲಯಗಳನ್ನು ಸ್ಥಾಪಿಸಲು ಮತ್ತು ಪರೀಕ್ಷಾ ಉಪಕರಣಗಳನ್ನು ಖರೀದಿಸುವ ಪ್ರಕ್ರಿಯೆಯಲ್ಲಿ ನಡೆದಿರುವ ಅವ್ಯವಹಾರದ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೩೭೫ (೧೩೭೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವತಿಯಿಂದ ರಾಜ್ಯದ ೮೦ ತಾಲ್ಲೂಕುಗಳಲ್ಲಿ NRDWP-Support Activity ಘಟಕದಡಿ ಪ್ರಯೋಗಾಲಯಗಳನ್ನು ಸ್ಥಾಪಿಸಲು ಪರೀಕ್ಷಾ ಉಪಕರಣಗಳನ್ನು (ಭೌತಿಕ ಮತ್ತು ರಾಸಾಯನಿಕ ಅಂಶಗಳು) ಖರೀದಿಸಲು ಟೆಂಡರ್‌ನ್ನು ಯಾವಾಗ ಆಹ್ವಾನಿಸಲಾಯಿತು ; ಕಾಮಗಾರಿಯ ಒಟ್ಟು ಮೊತ್ತವೆಷ್ಟು ;

(ಆ) ಈ ಟೆಂಡರ್‌ನಲ್ಲಿ ಭಾಗವಹಿಸುವ ಗುತ್ತಿಗೆದಾರರಿಗೆ ವಿಧಿಸಿದ ಷರತ್ತುಗಳು ಯಾವುವು ;

(ಇ) ಟೆಂಡರ್‌ನಲ್ಲಿ ಭಾಗವಹಿಸಿದ ಗುತ್ತಿಗೆದಾರರ ಸಂಖ್ಯೆ ಎಷ್ಟು; ಅಂತಿಮವಾಗಿ ಬಿಡ್‌ನ್ನು ಯಾವ ಗುತ್ತಿಗೆದಾರರಿಗೆ ವಹಿಸಲಾಗಿದೆ ;

(ಈ) ಟೆಂಡರ್‌ನಲ್ಲಿ ವಿಧಿಸಿದ ಎಲ್ಲಾ ಷರತ್ತುಗಳನ್ನು ಬಿಡ್‌ದಾರರು ಪೂರೈಸದಿದ್ದರೂ ಕಾಮಗಾರಿಯ ಗುತ್ತಿಗೆಯನ್ನು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಉ) ನಿಯಮಬಾಹಿರವಾಗಿ ಟೆಂಡರ್‌ನ್ನು ಬಿಡ್‌ದಾರರಿಗೆ ವಹಿಸಿದ್ದಲ್ಲಿ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಸರ್ಕಾರ ಅಗತ್ಯ ಶಿಸ್ತು ಕ್ರಮ ಕೈಗೊಳ್ಳುವುದೇ ?

## ೦೨–೦೨–೨೦೦೦ ಕ್ಕಿಂತ ಮೊದಲು ನೇಮಕವಾದ ಚಿತ್ರಕಲಾ ಶಿಕ್ಷಕರನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೩೭೬ (೧೩೭೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೦೨–೦೨–೨೦೦೦ ಕ್ಕಿಂತ ಮೊದಲು ಡಿ.ಎಂ.ಸಿ. ವಿದ್ಯಾರ್ಹತೆ ಹೊಂದಿದ ಎಷ್ಟು ಚಿತ್ರಕಲಾ ಶಿಕ್ಷಕರನ್ನು ವೇತನಾನುದಾನಕ್ಕೆ ಒಳಪಡಿಸಲಾಗಿದೆ ; (ಜಿಲ್ಲಾವಾರು ಹೆಸರು ಹಾಗೂ ವೇತನಾನುದಾನಕ್ಕೆ ಒಳಪಡಿಸಿದ ದಿನಾಂಕ ತಿಳಿಸುವುದು)

(ಆ) ವೇತನಾನುದಾನಕ್ಕೆ ಒಳಪಡಿಸಲು ಬಾಕಿ ಇರುವ ಪ್ರಕರಣಗಳೆಷ್ಟು; (ಜಿಲ್ಲಾವಾರು ಹೆಸರುಗಳನ್ನು ತಿಳಿಸುವುದು)

(ಇ) ಕೆಲವು ಜನ ಚಿತ್ರಕಲಾ ಶಿಕ್ಷಕರನ್ನು ವೇತನಾನುದಾನಕ್ಕೆ ಒಳಪಡಿಸಿ ಇನ್ನುಳಿದವರನ್ನು ವೇತನಾನುದಾನಕ್ಕೆ ಒಳಪಡಿಸದಿರಲು ಕಾರಣಗಳೇನು ;

(ಈ) ಬಾಕಿ ಇರುವ ಚಿತ್ರಕಲಾ ಶಿಕ್ಷಕರನ್ನು ಯಾವಾಗ ವೇತನಾನುದಾನಕ್ಕೆ ಒಳಪಡಿಸಲಾಗುವುದು ?

## ರೈ ಟೆಕ್ನಾಲಜಿ ವಿಶ್ವವಿದ್ಯಾಲಯವು ಕೇಂದ್ರಿಯ ಮಾನ್ಯತಾ ಸಂಸ್ಥೆಗಳಿಂದ ಮಾನ್ಯತೆ ಪಡೆಯದಿರುವುದು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೩೭೭ (೧೩೮೮) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈ ಟೆಕ್ನಾಲಜಿ ವಿಶ್ವವಿದ್ಯಾಲಯವು ಯಾವ ಶೈಕ್ಷಣಿಕ ವರ್ಷದಿಂದ ಕಾರ್ಯಾರಂಭ ಮಾಡಿದೆ ;

(ಆ) ಯಾವ ಸ್ಥಳದಲ್ಲಿ ಇದು ಕಾರ್ಯನಿರ್ವಹಿಸುತ್ತಿದೆ ;

(ಇ) ಈ ವಿಶ್ವವಿದ್ಯಾಲಯಕ್ಕೆ ಯಾವ ಯಾವ ಕೋರ್ಸ್‌ಗಳನ್ನು ನಡೆಸಲು ಸರ್ಕಾರ ಅನುಮತಿ ನೀಡಿದೆ ;

(ಈ) ಈ ಕೋರ್ಸುಗಳನ್ನು ಪ್ರಾರಂಭಿಸಲು ರಾಷ್ಟ್ರೀಯ ಮಟ್ಟದ ಮಾನ್ಯತಾ ಸಂಸ್ಥೆಗಳಿಂದ ಮಾನ್ಯತೆ ಪಡೆಯುವ ಷರತ್ತನ್ನು ವಿಧಿಸಿರುವುದು ನಿಜವೇ ;

(ಉ) ಹಾಗಿದ್ದಲ್ಲಿ, ಈ ವಿಶ್ವವಿದ್ಯಾಲಯವು ಕೃಷಿ ಹಾಗೂ ತಾಂತ್ರಿಕ ಕೋರ್ಸುಗಳನ್ನು ನಡೆಸಲು ರಾಷ್ಟ್ರೀಯ ಮಾನ್ಯತಾ ಸಂಸ್ಥೆಗಳಿಂದ ಮಾನ್ಯತೆ ಪಡೆದಿದೆಯೇ ;

(ಊ) ಯಾವ ದಿನಾಂಕದಂದು ಮಾನ್ಯತೆ ಪಡೆಯಲಾಗಿದೆ ;

(ಋ) ಮಾನ್ಯತೆ ಪಡೆಯದೇ ಇದ್ದಲ್ಲಿ ಅದನ್ನು ಸಾರ್ವಜನಿಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ತಿಳಿಸಲು ಸರ್ಕಾರ ಯಾವ ಕ್ರಮ ಅನುಸರಿಸಲಿದೆ ;

(ೠ) ವಿದ್ಯಾರ್ಥಿಗಳನ್ನು ಹಾಗೂ ಪಾಲಕರನ್ನು ತಪ್ಪು ದಾರಿಗೆಳೆದು ಮುಂದೆ ಪದವಿ ನೀಡುವಾಗ ವಿದ್ಯಾರ್ಥಿಗಳನ್ನು ಅತಂತ್ರ



ಪರಿಸ್ಥಿತಿಯತ್ತ ತಳ್ಳುವುದನ್ನು ತಪ್ಪಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಲಿದೆಯೇ ?

## ಕರ್ನಾಟಕ ಶಿಕ್ಷಣ ಕಾಯ್ದೆ ೧೯೮೩ ರನ್ನು ಸಮಗ್ರವಾಗಿ ತಿದ್ದುಪಡಿ ಮಾಡುವುದು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೩೭೮ (೧೩೮೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಶಿಕ್ಷಣ ಕಾಯ್ದೆ ೧೯೮೩ನ್ನು ಜಾರಿಗೊಳಿಸಿದ ನಂತರ ಶಿಕ್ಷಣ ರಂಗದಲ್ಲಿ ಹಲವಾರು ಮೂಲಭೂತ ಹಾಗೂ ಅಮೂಲಾಗ್ರ ಬದಲಾವಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ದೇಶದಾದ್ಯಂತ ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ ಜಾರಿಗೆ ಬಂದ ನಂತರ ಕರ್ನಾಟಕ ಶಿಕ್ಷಣ ಕಾಯ್ದೆ ೧೯೮೩ರ ಪ್ರಸ್ತುತತೆ ಕಡಿಮೆಯಾಗಿರುವುದು ನಿಜವೇ ;

(ಇ) ಇಲಾಖೆಯು ತಮ್ಮ ಅನುಕೂಲಕ್ಕೆ ತಕ್ಕಂತೆ ಒಂದು ಸಲ ಕರ್ನಾಟಕ ಶಿಕ್ಷಣ ಹಕ್ಕು ಕಾಯ್ದೆ ೧೯೮೩ರ ನಿಯಮಗಳನ್ನು ಇನ್ನೊಂದು ಸಲ ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆಯನ್ನು ಉಪಯೋಗಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕರ್ನಾಟಕ ಶಿಕ್ಷಣ ಹಕ್ಕು ಕಾಯ್ದೆ ೧೯೮೩ ರನ್ವಯ ಕೇಂದ್ರಿಯ ಪಠ್ಯಕ್ರಮದ ಶಾಲೆಗಳು ರಾಜ್ಯದ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುವುದಿಲ್ಲವೆಂದು ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆಯನ್ವಯ ಕೇಂದ್ರಿಯ ಪಠ್ಯಕ್ರಮದ ಶಾಲೆಗಳು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುತ್ತದೆ ಎಂದು ವ್ಯಾಖ್ಯಾನಿಸುತ್ತಿರುವುದು ತಪ್ಪಲ್ಲವೆ;

(ಉ) ಪ್ರಸ್ತುತ ಶೈಕ್ಷಣಿಕ ಪರಿಸ್ಥಿತಿಗನುಗುಣವಾಗಿ ಸಮಗ್ರವಾದ ಹೊಸ ಕಾನೂನೊಂದನ್ನು ಜಾರಿಗೊಳಿಸುವ ಚಿಂತನೆ ಸರ್ಕಾರಕ್ಕೆ ಇದೆಯೇ ;

(ಊ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಯಾವ ಕ್ರಮ ತೆಗೆದುಕೊಳ್ಳಲಿದೆ ?

## ಪಿ.ಯು.ಸಿ ಪ್ರವೇಶಕ್ಕೆ ಅನುಸರಿಸುತ್ತಿರುವ ಮಾನದಂಡಗಳು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೭೯ (೧೩೬೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ವರ್ಷ ಪಿಯುಸಿ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಏಕೀಕೃತಗೊಂಡ ರಾಜ್ಯವಾಪ್ತಿ ಅರ್ಜಿ ಆಹ್ವಾನಿಸುವ ಬಗ್ಗೆ ಪ್ರಸ್ತಾಪಿಸಿದ್ದು ಸರ್ಕಾರಕ್ಕೆ ತಿಳಿದಿದೆಯೇ ; ಹಾಗಿದ್ದಲ್ಲಿ, ಈ ಪ್ರಸ್ತಾಪದ ಬಗ್ಗೆ ಸರ್ಕಾರ ಕ್ರಮಕೈಗೊಳ್ಳದಿರಲು ಕಾರಣಗಳೇನು ; ಯಾವ ಶೈಕ್ಷಣಿಕ ಸಾಲಿನಿಂದ ಈ ಪದ್ಧತಿ ಜಾರಿಗೆ ಬರಲಿದೆ; ವಿಳಂಬಕ್ಕೆ ಕಾರಣಗಳೇನು ;

(ಆ) ಪಿಯುಸಿ ಪ್ರವೇಶಕ್ಕೆ ಅನುಸರಿಸುವ ಮಾನದಂಡಗಳೇನು; ರಾಜ್ಯವ್ಯಾಪ್ತಿ ಇರುವ ಪಿಯು ಕಾಲೇಜುಗಳ ಸಂಖ್ಯೆ ಎಷ್ಟು; (ಸರ್ಕಾರಿ, ಖಾಸಗಿ ಅನುದಾನಿತ, ಅನುದಾನರಹಿತ, ಅಲ್ಪಸಂಖ್ಯಾತರ ಜಿಲ್ಲಾವಾರು ವಿವರ ನೀಡುವುದು)

(ಇ) ಬೆಂಗಳೂರು ನಗರದ ವಿಧಾನಸಭಾ ಕ್ಷೇತ್ರವಾರು ಇರುವ ಕಾಲೇಜುಗಳೆಷ್ಟು ; (ಅಲ್ಪಸಂಖ್ಯಾತ, ಭಾಷಾ ಅಲ್ಪಸಂಖ್ಯಾವಾರು ಹಾಗೂ ಕಾಲೇಜುಗಳ ವಿವರ ಒದಗಿಸುವುದು)



(ಈ) ಪ್ರವೇಶ ಸೀಟುಗಳನ್ನು ಯಾವ ರೀತಿ ಹಂಚಿಕೆ ಮಾಡಲಾಗುತ್ತದೆ; ಇಲ್ಲಿ ರೋಸ್ಟರ್ ನಿಯಮಗಳನ್ನು ಅಳವಡಿಸಿಕೊಳ್ಳಲಾಗಿದೆಯೇ; ಮೆರಿಟ್ ಹಾಗೂ ಆಡಳಿತ ಮಂಡಳಿ ಕೋಟಾದ ವಿವರ ನೀಡುವುದು ; ನಿಯಮ ಇಲ್ಲದಿದ್ದಲ್ಲಿ ಕಾರಣಗಳೇನು ;

(ಉ) ಮ್ಯಾನೇಜ್‌ಮೆಂಟ್ ಕೋಟಾದಡಿ ಶೇ. ಅಂಕ ಪರಿಗಣಿಸದೇ ಪ್ರವೇಶ ಪಡೆಯಬಹುದೇ; ಪ್ರವೇಶ ಶುಲ್ಕ, ಡೊನೇಷನ್‌ಗೆ ಯಾವ ಮಿತಿಗಳನ್ನು ಅನುಸರಿಸಲಾಗುವುದು; ಇವುಗಳನ್ನು ಪಾಲಿಸದ ಕಾಲೇಜುಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಬೀದರ್ ಸರ್ಕಾರಿ ಪಾಲಿಟೆಕ್ನಿಕ್ ಹೊಸ ಕಟ್ಟಡ ಹಾಳಾಗುತ್ತಿರುವುದು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೮೦ (೧೩೭೦) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಸರ್ಕಾರಿ ಪಾಲಿಟೆಕ್ನಿಕ್ (ಹೊಸ) ಕಟ್ಟಡ ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಹೊಸದಾಗಿ ನಿರ್ಮಿಸಿದ ಈ ಕಟ್ಟಡದಲ್ಲಿ ಯಾವ ವರ್ಷದಿಂದ ಅಧ್ಯಯನ ಪ್ರಾರಂಭಿಸಲಾಗುವುದು ; ಹಾಗಿಲ್ಲದಿದ್ದಲ್ಲಿ, ಯಾವ ಕಾರಣಗಳಿಂದ ಪ್ರಾರಂಭಿಸದೇ ತಡೆಹಿಡಿಯಲಾಗಿದೆ ; (ವಿವರ ನೀಡುವುದು)

(ಇ) ಹೊಸದಾಗಿ ನಿರ್ಮಿಸಿದ ಕಾಲೇಜಿನ ಕಾಮಗಾರಿ ಪೂರ್ಣಗೊಂಡು ಎಷ್ಟು ವರ್ಷಗಳಾಗಿರುತ್ತದೆ ; ಕಟ್ಟಡದ ಕೆಲವು ಗಾಜುಗಳು ಹಾಗೂ

ಇತರ ವಸ್ತುಗಳು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಕಾಲೇಜನ್ನು ಯಾವಾಗ ಪ್ರಾರಂಭಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಕಂದಗುಳ ಗ್ರಾಮದಲ್ಲಿ CC ರಸ್ತೆ ಕೈಗೊಳ್ಳುವುದು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೮೧ (೧೩೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಬೀದರ್ ಜಿಲ್ಲೆಯ ಔರಾದ ತಾಲ್ಲೂಕಿನ ಕಂದಗುಳ ಗ್ರಾಮದಲ್ಲಿ SC/ST ಮತ್ತು ಅಲ್ಪಸಂಖ್ಯಾತ ಜನರಿಗೆ ಓಡಾಡಲು, ಪರಿಶಿಷ್ಟ ಪಂಗಡ ಕಾಲೋನಿಯಿಂದ ಇಸ್ಮಾಯಲ್ ಖಾದ್ರಿ ದರ್ಗಾದವರೆಗೆ ಹೋಗಲು CC ರಸ್ತೆ ಕಾಮಗಾರಿ ಯಾವಾಗ ಪ್ರಾರಂಭಿಸಲಾಗುವುದು ; ಯಾವ ಅವಧಿಯೊಳಗೆ ಕಾಮಗಾರಿ ಮುಕ್ತಾಯಗೊಳಿಸಲಾಗುವುದು ? (ವಿವರ ನೀಡುವುದು)

## ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವರ್ಗದವರಿಗೆ ಮನೆಗಳ ಹಂಚಿಕೆ ಕುರಿತು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೮೨ (೧೩೯೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ಜಿಲ್ಲೆಗಳ ವ್ಯಾಪ್ತಿಯಲ್ಲಿ ಇಂದಿರಾ ಆವಾಸ್, ಬಸವಶ್ರೀ ಆಶ್ರಯ ಯೋಜನೆ ಹಾಗೂ ವಿವಿಧ ವಸತಿ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವರ್ಗದವರಿಗೆ ಮನೆಗಳನ್ನು ಹಂಚಿಕೆ ಮಾಡಲಾಗಿದೆಯೇ ;



(ಆ) ಮಾಡಿದ್ದಲ್ಲಿ, ಯಾವ ಯಾವ ವರ್ಗಗಳಿಗೆ ಎಷ್ಟೆಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ; ಫಲಾನುಭವಿಗಳಿಗೆ ಹಸ್ತಾಂತರಿಸಿರುವ ಮನೆಗಳ ಸಂಖ್ಯೆ ಎಷ್ಟು; ಹಂಚಿಕೆಯಾಗದೆ ಇರುವ ಮನೆಗಳ ಸಂಖ್ಯೆ ಎಷ್ಟು ? (ಫಲಾನುಭವಿ ಹೆಸರಿನೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

## ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೮೩ (೧೩೮೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಗ್ರಾಮ ಪಂಚಾಯ್ತಿಗಳಿಗೆ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಕಳೆದ ೩ ವರ್ಷಗಳಿಂದ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ಪ್ರತ್ಯೇಕ ಗ್ರಾಮ ಪಂಚಾಯ್ತಿವಾರು ವಿವರ ನೀಡುವುದು)

(ಆ) ಬೀದರ್ ಜಿಲ್ಲೆಯ ಗ್ರಾಮ ಪಂಚಾಯ್ತಿಗಳಿಗೆ ಕುಡಿಯುವ ನೀರಿನ ನಿರ್ವಹಣೆಗೆ ೨೦೧೦–೧೧ನೇ ಸಾಲಿನಿಂದ ೨೦೧೫–೧೬ನೇ ಸಾಲಿನವರೆಗೆ ಗ್ರಾಮ ಪಂಚಾಯ್ತಿವಾರು ಬಿಡುಗಡೆ ಮಾಡಿರುವ ಅನುದಾನ ಎಷ್ಟು ? (ಗ್ರಾಮ ಪಂಚಾಯತ್‌ಗಳವಾರು, ವರ್ಷವಾರು ವಿವರ ನೀಡುವುದು)

## ದ್ವಿತೀಯ ಪಿ.ಯು.ಸಿ ಫಲಿತಾಂಶದ ಲೋಪದೋಷಗಳ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೮೪ (೧೯೬೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ದ್ವಿತೀಯ ಪಿ.ಯು.ಸಿ ಫಲಿತಾಂಶದಲ್ಲಿ ಲೋಪದೋಷಗಳು ಆಗಿರುವುದು ನಿಜವೇ ;

(ಆ) ಲೋಪದೋಷಗಳಾಗಿದ್ದಲ್ಲಿ, ರಾಜ್ಯದ ಎಷ್ಟು ವಿದ್ಯಾರ್ಥಿಗಳಿಗೆ ಆಗಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಆಗಿರುವ ಲೋಪದೋಷಗಳನ್ನು ಸರಿಪಡಿಸಲಾಗಿದೆಯೇ; ಎಷ್ಟು ವಿದ್ಯಾರ್ಥಿಗಳಿಗೆ ಸರಿಪಡಿಸಲಾಗಿದೆ ; (ಪೂರ್ಣ ವಿವರ ನೀಡುವುದು)

(ಈ) ಈ ಲೋಪದೋಷಗಳಿಗೆ ಕಾರಣ ಯಾರು; ಇವರ ಮೇಲೆ ಕೈಗೊಂಡ ಕ್ರಮಗಳೇನು? (ಪೂರ್ಣ ವಿವರ ನೀಡುವುದು)

## ರಾಜ್ಯದ ವಿವಿಧ ವಸತಿ ಯೋಜನೆಗಳ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೮೫ (೧೮೩೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ವಸತಿ ಯೋಜನೆಯಡಿ ಬಸವ ವಸತಿ, ಇಂದಿರಾ ಆವಾಸ್ ಮತ್ತು ಅಂಬೇಡ್ಕರ್ ವಸತಿ ಯೋಜನೆಯಡಿಗಳಲ್ಲಿ ಮಂಜೂರಾದ ಮನೆಗಳೆಷ್ಟು ; ಇವುಗಳಲ್ಲಿ ಪೂರ್ಣಗೊಂಡ ಮನೆಗಳೆಷ್ಟು ;



(ಆ) ಹಾಗಿದ್ದಲ್ಲಿ, ಸುಸ್ಥಿತಿಯಲ್ಲಿರದ ಮನೆಗಳೆಷ್ಟು ;

(ಇ) ಸುಸ್ಥಿತಿಯಲ್ಲಿರದ ಮನೆಗಳನ್ನು ದುರಸ್ಥಿ ಮಾಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಈ) ಸುಸ್ಥಿತಿಯಲ್ಲಿರದ ಮನೆಗಳನ್ನು ದುರಸ್ಥಿಗೊಳಿಸಲು ಇರುವ ಮಾನದಂಡಗಳೇನು ?

## ಗೋಕಾಕ್ ಫಾಲ್ಸ್‌ನ್ನು ಪ್ರವಾಸಿ ತಾಣವೆಂದು ಪರಿಗಣಿಸುವುದು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೮೬ (೧೮೩೭) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ಗೋಕಾಕ್ ತಾಲ್ಲೂಕಿನ ಗೋಕಾಕ ಫಾಲ್ಸ್‌ನ್ನು ಪ್ರವಾಸಿ ತಾಣವೆಂದು ಪರಿಗಣಿಸುವ ವಿಚಾರ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಅಭಿವೃದ್ಧಿ ಪಡಿಸಲು ಲಭ್ಯವಿರುವ ಜಮೀನು ಎಷ್ಟು ;

(ಇ) ಪ್ರವಾಸಿಗರಿಗೆ ಮೂಲಭೂತ ಸೌಕರ್ಯಗಳಾದ ಅತಿಥಿ ಗೃಹಗಳು, ಶೌಚಾಲಯ, ಹೂದೋಟ ಮುಂತಾದ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಈ) ಈಗಾಗಲೇ ಈ ಹಿಂದೆ ನಿರ್ಮಿಸಿರುವ ತೂಗು ಸೇತುವೆಯ ತುಕ್ಕು ಹಿಡಿದು ಶಿಥಿಲಗೊಂಡಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅದನ್ನು ಯಾವ ಕಾಲಮಿತಿಯಲ್ಲಿ ದುರಸ್ಥಿಪಡಿಸಿ ಪ್ರವಾಸಿಗರಿಗೆ ಮತ್ತು ಅಲ್ಲಿಯ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿಕೊಡಲಾಗುವುದು ?

## ಪ್ರವಾಸಿಗರ ಆಕರ್ಷಣೆಗೆ ಸರ್ಕಾರ ಕೈಗೊಂಡಿರುವ ಕ್ರಮ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೮೭ (೧೩೭೩) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವದ ಪ್ರವಾಸಿಗರ ಆಕರ್ಷಣೆಗೆ ಸರ್ಕಾರ ಕೈಗೊಂಡಿರುವ ಯೋಜನೆಗಳ್ಯಾವುವು ; ಮೂಲಭೂತ ಸೌಲಭ್ಯಗಳ ಕೊರತೆಯ ಹಿನ್ನೆಲೆಯಲ್ಲಿ ಪ್ರವಾಸೋದ್ಯಮಕ್ಕೆ ಹಿನ್ನಡೆಯಾಗಿರುವುದು ನಿಜವೇ ; ಇದಕ್ಕೆ ಕಾರಣಗಳೇನು ;

(ಆ) ಈ ನಿಟ್ಟಿನಲ್ಲಿ ಪ್ರವಾಸೋದ್ಯಮ ಇಲಾಖಾ ವ್ಯಾಪ್ತಿಗಳ ಆಸ್ತಿ–ಸ್ವತ್ತುಗಳನ್ನು ಖಾಸಗಿಯವರಿಗೆ ಗುತ್ತಿಗೆಗೆ ನೀಡಲು ಸರ್ಕಾರ ಮುಂದಾಗಿದೆಯೇ ;

(ಇ) ಹಾಲಿ ಇರುವ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಜೊತೆಗೆ ಕರ್ನಾಟಕ ಪ್ರವಾಸೋದ್ಯಮ ಮೂಲಸೌಕರ್ಯ ಹೆಸರಲ್ಲಿ ಕಂಪನಿ ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಈ) ಪಿಪಿಡಿಯಡಿಯಲ್ಲಿ ಅಭಿವೃದ್ಧಿ ಪಡಿಸಲು ಇರುವ ತೊಂದರೆಗಳೇನು; ಇಲಾಖೆಯ ಹಿಡಿತದಲ್ಲಿ ಎಷ್ಟು ಎಕರೆ ಜಾಗ ರಾಜ್ಯದಲ್ಲಿದೆ; (ಜಿಲ್ಲಾವಾರು ವಿವರ ಒದಗಿಸುವುದು)

(ಉ) ಸದರಿ ಸ್ಥಳಗಳ ಅಭಿವೃದ್ಧಿಗೆ ಬೇಕಾಗುವ ಸಂಪನ್ಮೂಲ ಎಷ್ಟು; ಇದನ್ನು ಖಾಸಗಿಯವರಿಂದ ಸಂಗ್ರಹಿಸಲಾಗುವುದೇ ; ಇದಕ್ಕಾಗಿ ಗುರುತಿಸಿರುವ ಪ್ರವಾಸಿ ಸ್ಥಳಗಳ್ಯಾವುವು ? (ಯೋಜನೆಯ ಸಂಪೂರ್ಣ ವಿವರಗಳನ್ನು ಒದಗಿಸುವುದು)



## ಅನಧಿಕೃತವಾಗಿ ನಡೆಸುತ್ತಿರುವ ಪ್ಲೇಹೋಂಗಳ ಕುರಿತು

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೮೮ (೧೩೭೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬೆಂಗಳೂರು ಸೇರಿದಂತೆ ಪ್ರಮುಖ ನಗರಗಳಲ್ಲಿ ಖಾಸಗಿಯವರು ಪ್ಲೇಹೋಂಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಪ್ಲೇಹೋಂಗಳನ್ನು ನಡೆಸಲು ಸರ್ಕಾರ ಅನುಮತಿ ನೀಡಿದೆಯೇ; ಇದಕ್ಕಿರುವ ಮಾನದಂಡಗಳೇನು ;

(ಇ) ಖಾಸಗಿಯವರು ಪ್ಲೇಹೋಂಗಳಲ್ಲಿ ಮಕ್ಕಳ ಪೋಷಕರಿಂದ ಅತಿ ಹೆಚ್ಚು ಶುಲ್ಕ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಶುಲ್ಕ ನಿಗಧಿಗೊಳಿಸಲು ಸರ್ಕಾರ ಅನುಮತಿ ನೀಡಿದೆಯೇ ;

(ಉ) ಶುಲ್ಕ ನಿಗಧಿಪಡಿಸುವ ಬಗ್ಗೆ ನಿಯಮಗಳನ್ನೇನಾದರೂ ರೂಪಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ ? (ಮಾಹಿತಿ ನೀಡುವುದು)

## ವಿಶೇಷ ಘಟಕ ಯೋಜನೆ ಅಡಿಯಲ್ಲಿ ಮೀಸಲಿಟ್ಟ ಹಣ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪೯ (೧೮೨೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಮತ್ತು ಮಕ್ಕಳ ಇಲಾಖೆ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ವಿಶೇಷ ಘಟಕ ಯೋಜನೆ ಅಡಿಯಲ್ಲಿ ಮೀಸಲಿಟ್ಟ ಹಣ ಎಷ್ಟು ;

(ಆ) ಈ ಹಣವನ್ನು ಯಾವ ಯಾವ ಬಾಬ್ತಿಗೆ ಖರ್ಚು ಮಾಡಲಾಗುವುದು ;

(ಇ) ಈ ಹಣವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ಎಷ್ಟೆಷ್ಟು ಖರ್ಚು ಮಾಡಲಾಗಿದೆ ?

## ಸರ್ಕಾರಿ ಶಾಲೆ ಸ್ಥಳಾಂತರಿಸುವುದು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫೦ (೧೩೮೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ಜಿಲ್ಲೆಯ ಮಾಗಡಿ ತಾಲ್ಲೂಕು ಮಾಡಬಾಳ್ ಹೋಬಳಿಯ ವ್ಯಾಪ್ತಿಯಲ್ಲಿ ಬರುವ ಕರ್ಲಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಪಾಠ ಶಾಲೆಯ ಸುತ್ತ ಮುತ್ತ ಸಮುದಾಯ ಭವನಗಳನ್ನು ನಿರ್ಮಿಸಿರುವುದರಿಂದ ಮಕ್ಕಳಿಗೆ ಕಲಿಕೆಯಲ್ಲಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಆ) ಈಗಾಗಲೇ ಸಂಬಂಧಪಟ್ಟ ಶಾಲೆಯ ಸುತ್ತ ಮುತ್ತಲಿನ ಗ್ರಾಮಸ್ಥರು ಮನವಿಯನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ಸಲ್ಲಿಸಿದ್ದರೂ ಸಹ ಈ ಶಾಲೆಯನ್ನು ಸ್ಥಳಾಂತರಿಸಲು ಏಕೆ ಕ್ರಮ ಜರುಗಿಸಿರುವುದಿಲ್ಲ ;

(ಇ) ನಿಯಮಾವಳಿಯಂತೆ ಸರ್ಕಾರಿ ಶಾಲೆಯ ಸುತ್ತ ಮುತ್ತಲು ಯಾವುದೇ ಸಮುದಾಯ ಭವನಗಳನ್ನು ನಿರ್ಮಿಸಲು ಅವಕಾಶ ಇದೆಯೇ ;

(ಈ) ಹಾಗಿದ್ದಲ್ಲಿ, ಈ ಶಾಲೆಯನ್ನು ಎಷ್ಟು ದಿನಗಳಲ್ಲಿ ಸ್ಥಳಾಂತರಿಸಿ ಮಕ್ಕಳಿಗೆ ಸೂಕ್ತ ರೀತಿಯಲ್ಲಿ ಶಿಕ್ಷಣ ನೀಡಲು ಕ್ರಮ ವಹಿಸಲಾಗುವುದು ?

## ಕೋಲಾರ ಜಿಲ್ಲೆಯಲ್ಲಿ ಶೌಚಾಲಯಗಳ ನಿರ್ಮಾಣ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫೧ (೧೩೮೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯಲ್ಲಿ ಒಟ್ಟು ಎಷ್ಟು ಗ್ರಾಮಗಳಿವೆ ;

(ಆ) ೨೦೧೪–೧೫ನೇ ಸಾಲಿನಲ್ಲಿ ಯಾವ ಯಾವ ಗ್ರಾಮಗಳಿಗೆ ಶೌಚಾಲಯದ ಸೌಲಭ್ಯ ಒದಗಿಸಲಾಗಿದೆ ;

(ಇ) ಯಾವ ಯಾವ ಹಳ್ಳಿಗೆ ಶುದ್ಧ ಕುಡಿಯುವ ನೀರಿನ ಸೌಲಭ್ಯಗಳನ್ನು ಒದಗಿಸಲಾಗಿದೆ ?

## ವಿಶೇಷ ಘಟಕ ಯೋಜನೆಯ ಅನುದಾನ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೯೨ (೧೩೮೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ವಿಶೇಷ ಘಟಕ ಯೋಜನೆ ಅಡಿಯಲ್ಲಿ ಮೀಸಲಿಟ್ಟ ಹಣವೆಷ್ಟು ;

(ಆ) ಮಾರ್ಚ್‌ವರೆಗೆ ಖರ್ಚಾದ ಹಣವೆಷ್ಟು ;

(ಇ) ಯಾವ ಯಾವ ಸಂಘ ಸಂಸ್ಥೆಗಳಿಗೆ ಎಷ್ಟೆಷ್ಟು ಹಣ ನೀಡಲಾಗಿದೆ ?

## ಮಹಿಳೆಯರಿಗೆ ಹಮ್ಮಿಕೊಳ್ಳಲಾಗಿರುವ ಕಾರ್ಯಕ್ರಮಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೯೩ (೧೩೯೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳೆಯರ ಆರ್ಥಿಕ, ಸಾಮಾಜಿಕ ರಾಜಕೀಯ ಸಬಲೀಕರಣಕ್ಕಾಗಿ ಹಾಗೂ ಅವರಿಗೆ ಸಮಾಜದಲ್ಲಿ ರಕ್ಷಣೆಯನ್ನು ನೀಡಿ, ಮುಖ್ಯ ವಾಹಿನಿಗೆ ತರಲು ಸರ್ಕಾರವು ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ;



(ಆ) ಈ ಇಲಾಖೆಯ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಸಂಬಂಧ ತಾಲ್ಲೂಕುಗಳಲ್ಲಿ ಸ್ತ್ರೀಶಕ್ತಿ ಭವನವನ್ನು ನಿರ್ಮಿಸಲು ಸೂಕ್ತ ನಿವೇಶನ ದೊರಕದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸ್ತ್ರೀಶಕ್ತಿ ಭವನವನ್ನು ನಿರ್ಮಿಸಲು ಸರ್ಕಾರವು ಯಾವ ಯಾವ ಕಾರ್ಯಕ್ರಮಗಳನ್ನು ಕೈಗೊಂಡಿರುತ್ತದೆ ?

## ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣದ ಅಭಿಯಾನದ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೯೪ (೧೩೯೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಿಂದ ರಾಜ್ಯದಲ್ಲಿನ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದ ಶಾಲಾ ಕಟ್ಟಡಗಳಿಗೆ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನದಡಿಯಲ್ಲಿ ಮಂಜೂರಾದ ಹಣ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇದರ ತಾಂತ್ರಿಕ ನಿರ್ವಹಣೆಗೆ ಸರ್ಕಾರ ಯಾರನ್ನು ನೇಮಿಸಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಇಲ್ಲಿಯವರೆವಿಗೂ ಮಂಜೂರು ಹಣದಲ್ಲಿ ಖರ್ಚುಮಾಡಿದ ಅನುದಾನವೆಷ್ಟು ? (ಜಿಲ್ಲಾವಾರು ವರ್ಷಾವಾರು ಮಾಹಿತಿ ನೀಡುವುದು)

## ಮಕ್ಕಳ ವಿಶೇಷ ನ್ಯಾಯಾಲಯ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೩೫ (೧೧೮೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಮಕ್ಕಳ ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಸ್ಥಾಪಿತವಾಗಿಲ್ಲವಾದರೆ, ಸರ್ಕಾರದ ಮುಂದಿರುವ ಸಮಸ್ಯೆಗಳೇನು ;

(ಇ) ಈ ಸಮಸ್ಯೆಗಳ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ನ್ಯಾಯಾಲಯಕ್ಕೆ ಬಂದ ಒಟ್ಟು ಪ್ರಕರಣಗಳ ಸಂಖ್ಯೆ ಎಷ್ಟು ಮತ್ತು ಇತ್ಯರ್ಥವಾದ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಉ) ಮಕ್ಕಳ ವಿಶೇಷ ನ್ಯಾಯಾಲಯಕ್ಕಾಗಿ ಸರ್ಕಾರ ಮೀಸಲಿಟ್ಟಿರುವ ಹಣವೆಷ್ಟು ಮತ್ತು ಖರ್ಚಾದ ಹಣವೆಷ್ಟು ? (ವಿವರ ನೀಡುವುದು)

## ಮಕ್ಕಳ ಕ್ರಿಯಾ ಯೋಜನೆ ಕುರಿತು.

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೩೬ (೧೩೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ೨೦೧೦ರ ನಂತರ ಕರ್ನಾಟಕ ರಾಜ್ಯ ಮಕ್ಕಳ ಕ್ರಿಯಾ ಯೋಜನೆಯನ್ನು ನಿರ್ಮಿಸಿದೆಯೆ ;



(ಆ) ೨೦೦೯–೧೦ ನೇ ಸಾಲಿನಲ್ಲಿ ನಿರ್ಮಿಸಲಾದ ಕರ್ನಾಟಕ ರಾಜ್ಯ ಮಕ್ಕಳ ಕ್ರಿಯಾ ಯೋಜನೆ ಕುರಿತು ಸಮಗ್ರವಾದ ವಿಶ್ಲೇಷಣೆ ಮತ್ತು ಮೌಲ್ಯಮಾಪನ ನಡೆಸಲಾಗಿದೆಯೆ ;

(ಇ) ರಾಷ್ಟ್ರೀಯ ಮಕ್ಕಳ ಕ್ರಿಯಾ ಯೋಜನೆಯ ಯಾವ ಯಾವ ಅಂಶಗಳನ್ನು ರಾಜ್ಯ ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಳ್ಳಲಾಗಿದೆ ;

(ಈ) ಜಿಲ್ಲಾ ಮಟ್ಟದಲ್ಲಿ ಮಕ್ಕಳ ಕ್ರಿಯಾ ಯೋಜನೆಯನ್ನು ನಿರ್ಮಿಸಿ ಅದನ್ನು ಜಾರಿಗೆ ತರುವ ದಿಶೆಯಲ್ಲಿ ಏನು ಪ್ರಯತ್ನಗಳು ನಡೆದಿವೆ ?

## ಶೇ.೦೯ರ ಅನುದಾನದಕ್ಕೊಳಪಟ್ಟ ಶಿಕ್ಷಕರ ಕುರಿತು.

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೩೭ (೧೮೨೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಶೇ. ೦೯ ರ ಅನುದಾನದಡಿಯಲ್ಲಿ ಅನುದಾನಕ್ಕೊಳಪಟ್ಟು ಕಾರ್ಯ ನಿರ್ವಹಿಸುತ್ತಿರುವ ಪದವಿ ಪೂರ್ವ ಉಪನ್ಯಾಸಕರ ಸಂಖ್ಯೆ ಎಷ್ಟು ; (ಉಪನ್ಯಾಸಕರ ಹೆಸರು, ಬೋಧಿಸುತ್ತಿರುವ ವಿಷಯ, ಸೇವೆಗೆ ಸೇರಿದ ದಿನಾಂಕ, ಅನುದಾನಕ್ಕೆ ಒಳಪಟ್ಟ ವರ್ಷ ಹಾಗೂ ದಿನಾಂಕ, ಕಾರ್ಯ ನಿರ್ವಹಿಸುತ್ತಿರುವ ಕಾಲೇಜು ಇವುಗಳ ಸಂಪೂರ್ಣ ವಿವರ ನೀಡುವುದು)

## ಎಸ್.ಎಸ್.ಎಲ್.ಸಿ ಪ್ರವೇಶ ಪಡೆದ ವಿದ್ಯಾರ್ಥಿನಿಯರ ಸಂಖ್ಯೆ ಕುರಿತು.

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೩೬೮ (೧೮೨೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸಕ್ತ ವರ್ಷ ಎಸ್.ಎಸ್.ಎಲ್.ಸಿ.ಗೆ ಪ್ರವೇಶ ಪಡೆದ ಒಟ್ಟು ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ;

(ಆ) ಪರೀಕ್ಷಾ ಅರ್ಜಿ ಭರ್ತಿ ಮಾಡಿದ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ;

(ಇ) ಪ್ರವೇಶ ಪತ್ರ ಪಡೆದವರ ಸಂಖ್ಯೆ ಎಷ್ಟು ;

(ಈ) ಪ್ರೌಢ ಶಾಲಾ ಹಂತದಲ್ಲಿ ಶಾಲೆಯನ್ನು ಬಿಡುತ್ತಿರುವ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು; (ಕಳೆದ ೦೨ ವರ್ಷದ ಮಾಹಿತಿ ನೀಡುವುದು)

(ಉ) ೮ನೇ ತರಗತಿಗೆ ಪ್ರವೇಶ ಪಡೆಯುತ್ತಿರುವ ವಿದ್ಯಾರ್ಥಿನಿಯರ ಸಂಖ್ಯೆಗಳು ಎಸ್.ಎಸ್.ಎಲ್.ಸಿ. ಮುಗಿಯುವ ವೇಳೆಗೆ ಇರುವ ವಿದ್ಯಾರ್ಥಿನಿಯರ ಸಂಖ್ಯೆಗೂ ಇರುವ ವ್ಯತ್ಯಾಸ ಸರ್ಕಾರದ ಗಮನಕ್ಕೆ ಬಂದಿದೆಯೇ ?



## ಸರ್ಕಾರಿ ಹಾಗೂ ಅನುದಾನಿತ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಹಿಂದಿ ಶಿಕ್ಷಕರ ಹುದ್ದೆಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೧೩೬೯ (೧೮೦೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಹಾಗೂ ಅನುದಾನಿತ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಹಿಂದಿ ಸಹ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಯಾವ ಸಮಯದಿಂದ ಸದರಿ ಹುದ್ದೆಗಳು ಖಾಲಿ ಇವೆ ; ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಹಿಂದಿ ವಿಷಯ ಪರಿವೀಕ್ಷಕರ (ಸಬ್ಜೆಕ್ಟ್ ಇನ್ಸ್‌ಪೆಕ್ಟರ್) ಹುದ್ದೆ ಸೃಜಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

(ಈ) ಹಾಗಾದರೆ, ಸದರಿ ಹುದ್ದೆಗಳನ್ನು ಇದುವರೆವಿಗೂ ಸೃಜಿಸದೆ ಇರಲು ಕಾರಣಗಳೇನು ; (ವಿವರ ಒದಗಿಸುವುದು)

(ಉ) ಯಾವ ಕಾಲಮಿತಿಯಲ್ಲಿ ವಿಷಯ ಪರಿವೀಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ?

## ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಉಪನ್ಯಾಸಕರ ಸ್ಥಾನಪನ್ನ ಬಡ್ತಿಯ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೪೦೦ (೧೮೦೦) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರಲ್ಲಿ ಸ್ಥಾನಪನ್ನ ಬಡ್ತಿಗೆ ಅರ್ಹತೆ ಪಡೆದಿದ್ದರೂ ಇದುವರೆವಿಗೂ ಎಷ್ಟು ಮಂದಿ ಬೋಧಕರಿಗೆ ಸ್ಥಾನಪನ್ನ ಬಡ್ತಿ ಸೌಲಭ್ಯ ನೀಡಿರುವುದಿಲ್ಲ;

(ಆ) ಯಾವ ಕಾಲಮಿತಿಯಿಂದ ಯಾವ ಸಮಯದಿಂದ ಬಡ್ತಿ ಸೌಲಭ್ಯ ನೀಡಿರುವುದಿಲ್ಲ ; ಇದುವರೆವಿಗೂ ನೀಡದೆ ಇರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯಲ್ಲಿ ಬಡ್ತಿ ಸೌಲಭ್ಯ ನೀಡಲಾಗುವುದು ;

(ಈ) ಸರ್ಕಾರಿ ಕಾಲೇಜಿನ ಉಪನ್ಯಾಸಕರಲ್ಲಿ ಪಿ.ಹೆಚ್.ಡಿ ಪದವಿ ಪಡೆದು ವಾರ್ಷಿಕ ವೇತನ ಪಡೆಯದೆ ಇರುವವರ ಸಂಖ್ಯೆ ಎಷ್ಟು ;

(ಉ) ಸದರಿಯವರಿಗೆ ವಾರ್ಷಿಕ ವೇತನ ಮಂಜೂರು ಮಾಡದೆ ಇರಲು ಕಾರಣವೇನು ;

(ಊ) ಯಾವ ಕಾಲಮಿತಿಯಲ್ಲಿ ವಾರ್ಷಿಕ ವೇತನ ಸೌಲಭ್ಯವನ್ನು ಕಲ್ಪಿಸಲಾಗುವುದು ?



## ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ದೈಹಿಕ ಶಿಕ್ಷಕರ ಹುದ್ದೆಗಳ ವಿವರ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೪೦೧ (೧೭೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಕರ (ಸಿಪಿಇಡಿ, ಬಿಪಿಇಡಿ) ಹುದ್ದೆಗಳ ಸಂಖ್ಯೆ ಎಷ್ಟು ; ಯಾವ ಸಮಯದಿಂದ ಖಾಲಿ ಉಳಿದಿದೆ ;

(ಆ) ಸದರಿ ಖಾಲಿ ಹುದ್ದೆಗಳನ್ನು ಇದುವರೆವಿಗೂ ಭರ್ತಿ ಮಾಡದಿರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ?

## ಕಾಲಮಿತಿ ಬಡ್ತಿಯ ಸೌಲಭ್ಯ ಕುರಿತು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೪೦೨ (೧೭೭೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ ಬಡ್ತಿ ಪಡೆದ ಶಿಕ್ಷಕರಿಗೆ ಕಾಲಮಿತಿ ವೇತನ ಬಡ್ತಿ ಸೌಲಭ್ಯ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಸೌಲಭ್ಯವನ್ನು ಕಲ್ಪಿಸದೆ ಇರಲು ಕಾರಣವೇನು ; (ವಿವರ ನೀಡುವುದು)

(ಇ) ಬಡ್ತಿ ಪಡೆದ ಶಿಕ್ಷಕರಿಗೆ ಯಾವ ಕಾಲಮಿತಿಯಲ್ಲಿ ಕಾಲಮಿತಿ ಬಡ್ತಿ ಸೌಲಭ್ಯವನ್ನು ನೀಡಲಾಗುವುದು ?

## ಅಂಗನವಾಡಿ ಕೇಂದ್ರದ ಕಟ್ಟಡಗಳ ಮಾಹಿತಿ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೦೩ (೧೮೬೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳೆಷ್ಟು; ಇದರಲ್ಲಿ ಎಷ್ಟು ಕೇಂದ್ರಗಳು ಸ್ವಂತ ಕಟ್ಟಡದಲ್ಲಿವೆ ; ಎಷ್ಟು ಕೇಂದ್ರಗಳು ಖಾಸಗಿ ಕಟ್ಟಡದಲ್ಲಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಖಾಸಗಿ ಕಟ್ಟಡಗಳಲ್ಲಿರುವ ಅಂಗನವಾಡಿ ಕೇಂದ್ರಗಳನ್ನು ಸ್ವಂತ ಕಟ್ಟಡಕ್ಕೆ ವರ್ಗಾಯಿಸಲಾಗುವುದು ಯಾವಾಗ ;

(ಇ) ಹಾವೇರಿ ಜಿಲ್ಲೆಯಲ್ಲಿ ಖಾಸಗಿ ಕಟ್ಟಡಕ್ಕೆ ಪ್ರತಿ ತಿಂಗಳು ವ್ಯಯಿಸುತ್ತಿರುವ ಬಾಡಿಗೆ ಎಷ್ಟು ? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)



## ಸಿ.ಇ.ಟಿ ಮೂಲಕ ಮರೈನ್ ಇಂಜನೀಯರಿಂಗ್ ಬಿ.ಇ. ಕೋರ್ಸಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳ ಭವಿಷ್ಯದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೦೪ (೧೮೦೨) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ಮರೈನ್ ಇಂಜನೀಯರಿಂಗ್ ಕಾಲೇಜಿನಲ್ಲಿ ಯಾವ ಯಾವ ಕೋರ್ಸುಗಳು ಚಾಲ್ತಿಯಲ್ಲಿವೆ ;

(ಆ) ಸಿ.ಇ.ಟಿ ಮೂಲಕ ಬಿ.ಇ. ಮರೈನ್ ಇಂಜನೀಯರಿಂಗ್ ಕೋರ್ಸಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳ ಈ ಕೋರ್ಸಿಗೆ ಡಿಜಿ ಅನುಮೋದನೆ ದೊರೆತಿದೆಯೇ ;

(ಇ) ಡಿಜಿ ಅನುಮೋದನೆ ಪಡೆಯದ ಈ ಮರೈನ್ ಇಂಜನೀಯರಿಂಗ್ ಕೋರ್ಸಿಗೆ ದೇಶದಲ್ಲೆಡೆ ಮಾನ್ಯತೆ ಇದೆಯೇ ;

(ಈ) ಡಿಜಿ ಕೋರ್ಸಿಗೂ ನಾನ್ ಡಿಜಿ ಕೋರ್ಸಿಗೂ ಇರುವ ವ್ಯತ್ಯಾಸವೇನು ;

(ಉ) ಡಿಜಿ ಅಪ್ರೂವ್ಡ್ ಕೋರ್ಸಿಗೆ ಸಿಇಟಿ ಮೂಲಕ ಬಂದ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಅನುಮೋದನೆ ಪಡೆದ ಬಿಇ ಮರೈನ್ ಇಂಜನೀಯರಿಂಗ್ ಕೋರ್ಸ್ ಮಾಡಿದವರಿಗೆ ರಾಜ್ಯದಲ್ಲಿ ಎಲ್ಲೆಲ್ಲಿ ಉದ್ಯೋಗಾವಕಾಶಗಳಿರುವುದನ್ನು ಕಲ್ಪಿಸಲು ಈ ಕೋರ್ಸಿಗೆ ಮಾನ್ಯತೆ ನೀಡಲಾಗಿದೆಯೇ ? (ಮಾಹಿತಿ ಒದಗಿಸುವುದು)

## ಅನುದಾನಿತ ಕಾಲೇಜುಗಳಲ್ಲಿನ ಪ್ರೋಫೆಸರ್ ಹುದ್ದೆಗಳು ಖಾಲಿ ಇರುವುದು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೦೫ (೧೮೦೩) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರಿ ಹಾಗೂ ಅನುದಾನಿತ ಕಾಲೇಜುಗಳಲ್ಲಿ ಒಟ್ಟು ಎಷ್ಟು ಪ್ರೋಫೆಸರ್/ಅಸಿಸ್ಟೆಂಟ್ ಪ್ರೋಫೆಸರ್‌ಗಳ ಹುದ್ದೆ ಖಾಲಿ ಇವೆ ; (ಕಾಲೇಜುವಾರು/ವಿಷಯವಾರು ಮಾಹಿತಿ ಒದಗಿಸುವುದು)

(ಆ) ಈ ಎಲ್ಲಾ ಹುದ್ದೆಗಳನ್ನು ಎಷ್ಟು ಅವಧಿಯೊಳಗೆ ಭರ್ತಿ ಮಾಡಲಾಗುವುದು ?

## ರಾಜ್ಯದ ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯಲ್ಲಿ ಜಾಹಿರಾತು ಫಲಕ ಅಳವಡಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೦೬ (೧೮೦೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯಲ್ಲಿ ಜಾಹಿರಾತು ಫಲಕ ಹಾಗೂ ಜಾಹಿರಾತು ಗೋಡೆ ಬರಹಗಳನ್ನು ಅಳವಡಿಸಲು ಇರುವ ಮಾರ್ಗಸೂಚಿಗಳೇನು ;

(ಆ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯಲ್ಲಿ ಜಾಹಿರಾತು ಫಲಕ ಮತ್ತು



ಜಾಹಿರಾತು ಗೋಡೆ ಬರಹಗಳಿಗೆ ವಿಧಿಸಲಾದ ಶುಲ್ಕದಿಂದ ಬಂದ ಆದಾಯವೆಷ್ಟು ; (ತಾಲ್ಲೂಕುವಾರು, ವರ್ಷವಾರು, ಗ್ರಾಮ ಪಂಚಾಯತ್‌ವಾರು ವಿವರ ನೀಡುವುದು)

(ಇ) ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯಲ್ಲಿ ಎಲ್ಲೆಂದರಲ್ಲಿ ಜಾಹಿರಾತು ಫಲಕ ಹಾಗೂ ಗೋಡೆ ಬರಹಗಳನ್ನು ಅಳವಡಿಸಲು ಅವಕಾಶ ಕಲ್ಪಿಸದೆ ಅವುಗಳ ನಿರ್ದಿಷ್ಟಪಡಿಸಿದ ಸ್ಥಳಾವಕಾಶ ಕಲ್ಪಿಸಲಾಗುವುದೇ ; ಇಲ್ಲವಾದಲ್ಲಿ ಕಾರಣವೇನು ; ಇದ್ದಲ್ಲಿ ಏನು ಕ್ರಮ ಕೈಗೊಳ್ಳಲಾಗುವುದು ?

## ಉಡುಪಿ ಜಿಲ್ಲೆಯಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳ ೧ನೇ ತರಗತಿಯಲ್ಲಿನ ವಿದ್ಯಾರ್ಥಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೦೭ (೧೮೦೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ೧ನೇ ತರಗತಿಗೆ ಹತ್ತು ವಿದ್ಯಾರ್ಥಿಗಳಿಗಿಂತ ಕಡಿಮೆ ದಾಖಲಾತಿಯಾಗಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ; ಅವು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇಂತಹ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಕೊರತೆ ಇರುವ ಬೋಧಕ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಇಂತಹ ಶಿಕ್ಷಣ ಸಂಸ್ಥೆಗಳನ್ನು ಮುಚ್ಚಲಾಗುವುದೇ; ಇಲ್ಲವಾದಲ್ಲಿ ಅವುಗಳ ಪುನಃಶ್ಚೇತನಕ್ಕೆ ಕ್ರಮ ಕೈಗೊಳ್ಳಲಾಗುವುದೇ ?

## ರಾಜ್ಯದಲ್ಲಿ ನೇಮಕವಾದ ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಡ್–೨ ಶಿಕ್ಷಕರುಗಳಿಗೆ ಸೌಲಭ್ಯ ನೀಡುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೦೮ (೧೮೦೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೧೦ ವರ್ಷಗಳ ಹಿಂದೆ ಸರ್ವ ಶಿಕ್ಷಣ ಅಭಿಯಾನದಡಿ ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಡ್–೨ ಎಂದು ನೇಮಕಾತಿಗೊಂಡಿದ್ದರೂ ಈ ತನಕ ಪ್ರಾಥಮಿಕ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸರ್ವ ಶಿಕ್ಷಣ ಅಭಿಯಾನದಡಿ ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಡ್–೨ ಎಂದು ನೇಮಕಗೊಂಡಿದ್ದರೂ ಸಹ ಈ ಶಿಕ್ಷಕರುಗಳಿಗೆ ಪ್ರೌಢಶಾಲಾ ಸಹ ಶಿಕ್ಷಕರಿಗೆ ನೀಡಲಾಗುತ್ತಿರುವ ಸೌಲಭ್ಯಗಳನ್ನು ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲಾಗುವುದೇ ; ಇಲ್ಲವಾದಲ್ಲಿ ಕಾರಣವೇನು ;

(ಇ) ಸರ್ವ ಶಿಕ್ಷಣ ಅಭಿಯಾನದಡಿ ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಡ್–೨ ಎಂದು ನೇಮಕವಾದ ಶಿಕ್ಷಕರು ಪ್ರೌಢಶಾಲಾ ಶಿಕ್ಷಕರಿಗೆ ನೀಡುವ ಸೌಲಭ್ಯಗಳನ್ನು ಕೋರಿ ಕೆ.ಎ.ಟಿ ಮತ್ತು ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಿ ನ್ಯಾಯಾಲಯದ ಆದೇಶ



ಇವರ ಪರವಾಗಿರುವುದು ನಿಜವೇ ; ಇವರ ಪರವಾಗಿದ್ದರೆ ಸರ್ಕಾರ ಈ ತನಕ ನ್ಯಾಯಾಲಯದ ಆದೇಶವನ್ನು ಪಾಲಿಸದಿರಲು ಕಾರಣವೇನು ; ( ಕೆ.ಎ.ಟಿ ಹಾಗೂ ಮಾನ್ಯ ಉಚ್ಛ ನ್ಯಾಯಾಲಯದ ಆದೇಶ ಪ್ರತಿ ಒದಗಿಸುವುದು)

(ಈ) ಸರ್ವಶಿಕ್ಷಣ ಅಭಿಯಾನದಡಿ ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಡ್–೨ ಎಂದು ಶಿಕ್ಷಕರನ್ನು ನೇಮಕ ಮಾಡಿಕೊಳ್ಳುವಾಗ ಅವರಿಗೆ ವಿಶೇಷ ಸೇವಾ ನಿಯಮಗಳನ್ನು ಅಳವಡಿಸಲಾಗಿದೆಯೇ ; ಅಳವಡಿಸಿದ್ದಲ್ಲಿ, ನಿಯಮಗಳು ಯಾವುವು ; ಇಲ್ಲವಾದಲ್ಲಿ ಕಾರಣವೇನು ?

## ಉಡುಪಿ ಜಿಲ್ಲೆಯ ಜಿ.ಪಂ, ತಾ.ಪಂ, ಗ್ರಾ.ಪಂ.ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸೇವಾ ಖಾಯಂಮಾತಿ ಹೊಂದದ ಸಿಬ್ಬಂದಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೦೯ (೧೮೦೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸೇವಾ ಖಾಯಂಮಾತಿ ಹೊಂದಿದ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಗ್ರಾಮ ಪಂಚಾಯತ್‌ವಾರು ಸಿಬ್ಬಂದಿಗಳ ಹೆಸರು, ವಿಳಾಸ, ಹುದ್ದೆ, ಕಾರ್ಯನಿರ್ವಹಿಸುತ್ತಿರುವ ಅವಧಿಯೊಂದಿಗೆ ವಿವರ ನೀಡುವುದು)

(ಆ) ಈ ಜಿಲ್ಲೆಯ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸೇವಾ ಖಾಯಂಮಾತಿ ಹೊಂದದ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಗ್ರಾಮ ಪಂಚಾಯತ್‌ವಾರು ಸಿಬ್ಬಂದಿಗಳ ಹೆಸರು, ವಿಳಾಸ, ಹುದ್ದೆ, ಕಾರ್ಯನಿರ್ವಹಿಸುತ್ತಿರುವ ಅವಧಿಯೊಂದಿಗೆ ವಿವರ ನೀಡುವುದು)

(ಇ) ಈ ಜಿಲ್ಲೆಯ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್‌ಗಳಲ್ಲಿ ಸುಮಾರು ೧೦ ವರ್ಷಕ್ಕೂ ಮೇಲ್ಪಟ್ಟು ಕಾರ್ಯನಿರ್ವಹಿಸುತ್ತಿದ್ದು ಇನ್ನೂ ಸೇವಾಖಾಯಂಮಾತಿ ಹೊಂದದ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಗ್ರಾಮ ಪಂಚಾಯತ್‌ವಾರು ಸಿಬ್ಬಂದಿಗಳ ಹೆಸರು, ವಿಳಾಸ, ಹುದ್ದೆಯೊಂದಿಗೆ ವಿವರ ನೀಡುವುದು)

(ಈ) ಈ ಜಿಲ್ಲೆಯ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸೇವಾ ಖಾಯಂಮಾತಿ ಹೊಂದದ ಸಿಬ್ಬಂದಿಗಳಿಗೆ ಸೇವಾ ಖಾಯಂಮಾತಿ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ ಇವರ ಉದ್ಯೋಗ ಭದ್ರತೆಗೆ ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ?



## ರಾಜ್ಯದಲ್ಲಿ ಕಾಗದರಹಿತ (Paper Less)ವಾಗಿ ಕಾರ್ಯನಿರ್ವಹಿಸುತ್ತಿರುವ ಜಿ.ಪಂ. ಹಾಗೂ ತಾ.ಪಂ.ಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೧೦ (೧೮೦೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾಗದ ರಹಿತ (Paper Less)ವಾಗಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್‌ಗಳು ಎಷ್ಟು ; ಅವು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಾಗದ ರಹಿತ (Paper Less)ವಾಗಿ ಕಾರ್ಯನಿರ್ವಹಿಸದೆ ಇರುವ ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯುತ್‌ಗಳು ಕಾಗದ ರಹಿತವಾಗಿ ಕಾರ್ಯನಿರ್ವಹಿಸುವಂತೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಜ್ಯದಲ್ಲಿನ ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್‌ಗಳಿಗೆ ಸಾರ್ವಜನಿಕರು ಅಕ್ರಮ ಹಾಗೂ ಸಮಸ್ಯೆಗಳ ಕುರಿತು ಇ–ಮೇಲ್ ಮುಖಾಂತರ ದೂರು ಸಲ್ಲಿಸಲು ಅವಕಾಶವಿದೆಯೇ ; ಇದ್ದಲ್ಲಿ ದೂರನ್ನು ಯಾವ ಹಂತದ ಅಧಿಕಾರಿಯ ಇ–ಮೇಲ್‌ಗೆ ಕಳುಹಿಸಬೇಕು; (ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್‌ಗಳ ದೂರು ಸ್ವೀಕರಿಸುವ ಅಧಿಕಾರಿಯ ಇ–ಮೇಲ್ ವಿಳಾಸದೊಂದಿಗೆ ವಿವರ ನೀಡುವುದು)

(ಈ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್‌ಗಳಿಗೆ ಇ–ಮೇಲ್ ಮುಖಾಂತರ ಬಂದ ದೂರುಗಳ ಸಂಖ್ಯೆ ಎಷ್ಟು ; ಈ ದೂರುಗಳ ವಿರುದ್ಧ ತೆಗೆದುಕೊಂಡ ಕ್ರಮಗಳೇನು ? (ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್‌ವಾರು ವಿವರ ನೀಡುವುದು)

## ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಜಿಲ್ಲಾ ಪಂಚಾಯತ್‌ಗಳಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳ ಕಲ್ಯಾಣ ಕಾರ್ಯಕ್ರಮ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೪೧೧ (೧೮೨೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್‌ಗಳಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳ ಹಾಗೂ ವಿಕಲ ಚೇತನರ ಕಲ್ಯಾಣಕ್ಕಾಗಿ ಕಾಯ್ದಿರಿಸಿದ ಹಾಗೂ ಖರ್ಚು ಮಾಡಿದ ಅನುದಾನವೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವರ್ಷವಾರು ವಿವರ ನೀಡುವುದು)

(ಆ) ಗ್ರಾಮ ಪಂಚಾಯತ್ ನಿಧಿಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಕಲ್ಯಾಣಕ್ಕಾಗಿ ಕಾಯ್ದಿರಿಸಬೇಕಾದ ಅನುದಾನದ ಬಗ್ಗೆ ಹೊರಡಿಸಿರುವ ಆದೇಶಗಳೆಷ್ಟು ; (ಪ್ರತಿ ಒದಗಿಸುವುದು)

(ಇ) ಗ್ರಾಮ ಪಂಚಾಯತ್‌ಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ನಿಧಿಗಳನ್ನು ಸಮರ್ಪಕವಾಗಿ ನಿಗದಿತ ಅವಧಿಯೊಳಗೆ ಖರ್ಚು



ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಜಿಲ್ಲಾ ಪಂಚಾಯತ್‌ಗಳು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳ ಕಲ್ಯಾಣ ಕಾರ್ಯಕ್ರಮ ಮತ್ತು ವಿಕಲ ಚೇತನರ ಕಲ್ಯಾಣ ಕಾರ್ಯಕ್ರಮಗಳಲ್ಲಿ ಕೈಗೊಳ್ಳಬಹುದಾದ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ವಿವರವಾದ ಮಾರ್ಗಸೂಚಿ ಹೊರಡಿಸಲಾಗಿದೆಯೇ ; ಇಲ್ಲವಾದಲ್ಲಿ, ಯಾವಾಗ ಈ ಬಗ್ಗೆ ಮಾರ್ಗಸೂಚಿ ಹೊರಡಿಸಲಾಗುವುದು ? (ವಿವರ ನೀಡುವುದು)

## ಕೇಂದ್ರದ ಅನುದಾನ ಗ್ರಾಮ ಪಂಚಾಯತ್ ವಿದ್ಯುತ್ ಬಿಲ್ಲಿಗಾಗಿ ಕಡಿತಗೊಳಿಸುತ್ತಿರುವುದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೪೧೨ (೧೮೩೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತ್‌ಗಳು ವಿದ್ಯುತ್ ದಾರಿ ದೀಪ ಮತ್ತು ಕುಡಿಯುವ ನೀರಿನ ಸ್ಥಾವರಗಳಿಗೆ ಸಂಬಂಧಿಸಿದಂತೆ ಎಸ್ಕಾಂ ಗಳಿಗೆ ಪಾವತಿಸಲು ಬಾಕಿ ಇರುವ ಮೊತ್ತ ಎಷ್ಟು ; (ತಾಲ್ಲೂಕುವಾರು ಜಿಲ್ಲಾವಾರು ವಿವರ ನೀಡುವುದು)

(ಆ) ಕೇಂದ್ರದ ೧೫ನೇ ಹಣಕಾಸು ಯೋಜನೆಯ ಅನುದಾನವನ್ನು ಗ್ರಾಮ ಪಂಚಾಯತ್‌ಗಳ ಬಾಕಿ ಇರುವ ವಿದ್ಯುತ್ ಪಾವತಿಗೆ ಸಂಬಂಧಿಸಿದಂತೆ ಕಡಿತಗೊಳಿಸುತ್ತಿರುವುದು ನಿಜವೇ ; ಹಾಗಿದ್ದಲ್ಲಿ,

ಕಡಿತಗೊಳಿಸಿದ ಅನುದಾನ ಎಷ್ಟು ; (ತಾಲ್ಲೂಕುವಾರು, ಜಿಲ್ಲಾವಾರು ವಿವರ ನೀಡುವುದು)

(ಇ) ಕೇಂದ್ರ ಸರ್ಕಾರ ರಾಜ್ಯಕ್ಕೆ ಬಿಡುಗಡೆ ಮಾಡಿರುವ ೧೩ನೇ ಹಣಕಾಸು ಯೋಜನೆಯ ಅನುದಾನ ರಾಜ್ಯಮಟ್ಟದಲ್ಲಿಯೇ ಉಳಿದಿರುವುದು ನಿಜವೇ ; ಸಕಾಲದಲ್ಲಿ ಜಿಲ್ಲಾ ಪಂಚಾಯತ್/ ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್‌ಗಳಿಗೆ ಅನುದಾನ ಬಿಡುಗಡೆ ಮಾಡಲಾಗುತ್ತಿದೆಯೇ ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಕೇಂದ್ರದ ೧೩ನೇ ಹಣಕಾಸು ಯೋಜನೆಯ ಅನುದಾನವನ್ನು ಗ್ರಾಮ ಪಂಚಾಯತ್‌ಗಳ ಬಾಕಿ ವಿದ್ಯುತ್ ಬಿಲ್ಲಿಗೆ ಕಡಿತಗೊಳಿಸುವ ಸಂಬಂಧ ಹೊರಡಿಸಿದ ಆದೇಶವನ್ನು ಹಿಂಪಡೆಯುವ ಬಗ್ಗೆ ಸರ್ಕಾರದ ನಿಲುವೇನು ; ಹಿಂಪಡೆಯುವುದಾದರೆ ಯಾವಾಗ ಹಿಂಪಡೆಯಲಾಗುವುದು ?

## ಆರ್‌ಡಿಓ ಹುದ್ದೆ ನೇಮಕಾತಿ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೪೧೩ (೧೮೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ "ರೂರಲ್ ಡೆವಲಪ್‌ಮೆಂಟ್ ಹುದ್ದೆ"ಗಳನ್ನು ಸೃಜಿಸಲಾಗಿದೆಯೇ ; ಹೌದಾದಲ್ಲಿ, ಒಟ್ಟು ಎಷ್ಟು ಹುದ್ದೆಗಳನ್ನು ಸೃಜಿಸಲಾಗಿದೆ ;



(ಆ) ರೂರಲ್ ಡೆವಲಪ್‌ಮೆಂಟ್ ಹುದ್ದೆಗಳನ್ನು ಯಾವ ರೀತಿಯಲ್ಲಿ ನೇಮಕಾತಿ ಮಾಡಲಾಗುವುದು ; ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗುವುದು ಯಾವಾಗ ;

(ಇ) ನೇರ ನೇಮಕಾತಿ ಮತ್ತು ಪದೋನ್ನತಿಗೆ ನೀಡುವ ಶೇಕಡವಾರು ಸಂಖ್ಯೆ ಎಷ್ಟು ;

(ಈ) ಸಹಾಯಕ ನಿರ್ದೇಶಕರ ಹುದ್ದೆಗಳಿಗೆ ಆರ್‌ಡಿಓ ಗಳಿಂದ ಪದೋನ್ನತಿ ನೀಡಲಾಗುತ್ತಿದೆಯೇ ; ಹೌದಾದಲ್ಲಿ ಪ್ರಸಕ್ತ ಯಾವಾಗ ಪದೋನ್ನತಿ ನೀಡಲಾಗುವುದು ;

(ಉ) ಖಾಲಿ ಇರುವ ಸಹಾಯಕ ನಿರ್ದೇಶಕರು, ಕಾರ್ಯನಿರ್ವಾಹಕ ಅಧಿಕಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿ, ಲೆಕ್ಕ ಸಹಾಯಕರು ಹುದ್ದೆಗಳಿಗೆ ಪದೋನ್ನತಿ ಮತ್ತು ನೇರ ನೇಮಕಾತಿ ಯಾವಾಗ ಮಾಡಲಾಗುವುದು ?

## ಪುನರ್ ವಿನ್ಯಾಸಗೊಳಿಸಲಾಗಿರುವ ಅಂಗನವಾಡಿ ವ್ಯವಸ್ಥೆ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೪೧೪ (೧೮೧೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪುನರ್ ವಿನ್ಯಾಸಗೊಳಿಸಲಾಗಿರುವ (Restructure ICDS) ಅಂಗನವಾಡಿ ವ್ಯವಸ್ಥೆಯಂತೆ, ಮಕ್ಕಳಿಗೆ ನೀಡುವ ಸೌಲಭ್ಯಗಳಲ್ಲಿ ಬದಲಾವಣೆಯನ್ನು ಜಾರಿಗೆ ತರಲಾಗಿದೆಯೇ ;

(ಆ) ತಾಲ್ಲೂಕು/ಜಿಲ್ಲೆಯಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ;

(ಇ) ಹಾಜರಾಗುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ;

(ಈ) ಅಂಗನವಾಡಿಗಳಿಗೆ ಕೇಂದ್ರ ಸರ್ಕಾರದಿಂದ ಸಿಗುತ್ತಿದ್ದ ಅನುದಾನದಲ್ಲಿ ಆದ ಬದಲಾವಣೆಯಿಂದ ರಾಜ್ಯದ ಕಾರ್ಯಕ್ರಮದ ಮೇಲೆ ಎಂತಹ ಪ್ರತಿಕೂಲ ಪರಿಣಾಮಗಳು ಆಗಿವೆ ; ಮತ್ತು ಅದನ್ನು ನಿವಾರಿಸಿಕೊಳ್ಳಲು ಸರ್ಕಾರ ಮಾಡಿರುವ ಪ್ರಯತ್ನಗಳೇನು ?

## ಪದವಿ ಕಾಲೇಜಿನ ಅತಿಥಿ ಉಪನ್ಯಾಸಕರ ನೇಮಕಾತಿ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೪೧೫ (೧೮೧೨) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದವಿ ಕಾಲೇಜಿನ ಅತಿಥಿ ಉಪನ್ಯಾಸಕರ ನೇಮಕಕ್ಕೆ ಸಂಬಂಧಿಸಿದಂತೆ ಉನ್ನತ ಮಟ್ಟದ ಸಮಿತಿಯನ್ನು ರಚಿಸುವುದಾಗಿ ಹೇಳಿಕೆ ನೀಡಿದ್ದಾಗ್ಯೂ ಈವರೆವಿಗೆ ಕಾರ್ಯಗತ ಮಾಡದಿರಲು ಕಾರಣಗಳೇನು ;

(ಆ) ಈ ವಿಷಯಕ್ಕೆ ಸಂಬಂಧಪಟ್ಟಂತೆ ಪದವಿ ಕಾಲೇಜಿನ ಅತಿಥಿ ಉಪನ್ಯಾಸಕರು ದಿನಾಂಕ: ೧೫.೦೬.೨೦೧೫ರಿಂದ ಪ್ರತಿಭಟನೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈಗ ಕಾಲೇಜುಗಳು ಆರಂಭವಾಗುವ ಸಮಯವಿದ್ದು, ಈ ಉಪನ್ಯಾಸಕರ ಪ್ರತಿಭಟನೆಯ ಗೈರುಹಾಜರಿಯಿಂದ ವಿದ್ಯಾರ್ಥಿಗಳ ಭವಿಷ್ಯಕ್ಕೆ ತೊಂದರೆ ಆಗುವುದನ್ನು ತಡೆಯಲು ಸರ್ಕಾರ ಏನು ಕ್ರಮ ತೆಗೆದುಕೊಳ್ಳುವುದು ?



## ಅಂಧ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ನೀಡುವ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೪೧೬ (೧೮೧೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅಂಧ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ನೀಡುವ ಕಾರ್ಯಕ್ರಮ ಇದೆಯೇ ;

(ಆ) ಇದ್ದರೆ, ೨೦೧೪–೧೫ನೇ ಸಾಲಿನಲ್ಲಿ ಹಂಚಿಕೆ ಮಾಡಿರುವ ಹಣವೆಷ್ಟು ;

(ಇ) ಈ ಹಣದಲ್ಲಿ ವೆಚ್ಚ ಮಾಡಿರುವುದೆಷ್ಟು ? (ಭೌತಿಕ ಹಾಗೂ ಆರ್ಥಿಕ ವಿವರ ನೀಡುವುದು)

## ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದ ಪಠ್ಯಕ್ರಮ ಪರಿಷ್ಕರಿಸುವ ಯೋಚನೆ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೪೧೭ (೧೮೧೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದ ಪಠ್ಯಕ್ರಮವನ್ನು ಪರಿಷ್ಕರಿಸುವ ಯೋಚನೆ ಹಾಗೂ ಯೋಜನೆ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಈ ಹಿಂದೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಪಠ್ಯಕ್ರಮವನ್ನು ಎಂದು ಪರಿಷ್ಕರಿಸಲಾಗಿತ್ತು ;

(ಇ) ಈ ಹಿಂದೆ ಪರಿಷ್ಕರಣೆ ನಡೆದ ಸಂದರ್ಭದಲ್ಲಿ ರಾಷ್ಟ್ರೀಯ ಪಠ್ಯಕ್ರಮ ೨೦೦೫ ರ ಮಾನದಂಡಗಳನ್ನು ಅನುಸರಿಸಲಾಗಿದೆಯೇ ;

(ಈ) "ರಾಷ್ಟ್ರೀಯ ಪಠ್ಯಕ್ರಮ ೨೦೦೫ರ" ಆಧಾರದಲ್ಲಿ "ಕರ್ನಾಟಕ ಪಠ್ಯಕ್ರಮ"ವನ್ನು ಎಂದು ಜಾರಿಗೊಳಿಸಲಾಯಿತು ;

(ಉ) "ರಾಷ್ಟ್ರೀಯ ಪಠ್ಯಕ್ರಮ ೨೦೧೨"ನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗಿದೆಯೇ; ಇದಕ್ಕೆ ಪೂರಕವಾದ ಕರ್ನಾಟಕದ ಪಠ್ಯಕ್ರಮ ನೀತಿಯನ್ನು ಅನುಷ್ಠಾನ ಮಾಡಲಾಗುತ್ತಿದೆಯೇ; ಇಲ್ಲದಿದ್ದಲ್ಲಿ, ಎಂದಿನಿಂದ ಅನುಷ್ಠಾನಗೊಳಿಸಲಾಗುವುದು ?

## ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೪೧೮ (೧೮೧೬) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇವುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಯವರ ಸಂಖ್ಯೆ ಎಷ್ಟು ; (ಸಿಬ್ಬಂದಿಯ ಸಂಖ್ಯೆಯನ್ನು ಸಂಸ್ಥೆವಾರು ನೀಡುವುದು)

(ಇ) ಮೇಲ್ಕಂಡ ಸಿಬ್ಬಂದಿಯವರಿಗೆ ವೇತನ ವಿತರಣೆಯಲ್ಲಿ ಆಗುತ್ತಿರುವ ವಿಳಂಬ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಪ್ರತಿ ತಿಂಗಳು ೧ನೇ ತಾರಿಖಿನಂದು ಈ ಸಿಬ್ಬಂದಿಯವರಿಗೆ ಸಂಬಳ ವಿತರಣೆ ಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ? (ಮಾಹಿತಿ ನೀಡುವುದು)



## ಪ್ರೌಢ ಶಾಲಾ ವಿಭಾಗಕ್ಕೆ ಮುಖ್ಯೋಪಾಧ್ಯಾಯರ ಹುದ್ದೆಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೪೧೯ (೧೮೧೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಜೂನಿಯರ್ ಕಾಲೇಜುಗಳಲ್ಲಿ ಪ್ರೌಢ ಶಾಲಾ ವಿಭಾಗಕ್ಕೆ ಮುಖ್ಯೋಪಾಧ್ಯಾಯರ ಹುದ್ದೆಗಳನ್ನು ಸೃಷ್ಟಿಸಲಾಗಿದೆ ;

(ಆ) ಸೃಷ್ಟಿಸಿದ್ದರೆ, ಜಿಲ್ಲಾವಾರು, ಕಾಲೇಜುವಾರು ಮಾಹಿತಿ ನೀಡುವುದು ; ಈ ಬಗ್ಗೆ ಸರ್ಕಾರದ ಚಿಂತನೆ ಏನು ;

(ಇ) ಸೃಷ್ಟಿಸದಿದ್ದರೆ ಯಾವಾಗ ಸೃಷ್ಟಿಸಲಾಗುವುದು ; ಈ ಬಗ್ಗೆ ಸರ್ಕಾರದ ಚಿಂತನೆ ಏನು ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳಾವುವು ?

## ಕ್ಷೇತ್ರ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ಹುದ್ದೆಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೪೨೦ (೧೮೧೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ: ೩೧–೦೫–೨೦೧೫ರವರೆಗೆ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ತತ್ಸಮಾನ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ೨೦೧೩ ಜೂನ್‌ನಲ್ಲಿ ಸದರಿ ಹುದ್ದೆಗಳಿಗೆ ಪ್ರಸ್ತಾವನೆಯನ್ನು (ಸಿಆರ್) ಸ್ವೀಕರಿಸಲಾಗಿದೆಯೇ ;

(ಇ) ಸ್ವೀಕರಿಸಿದ್ದರೆ, ಇದುವರೆಗೆ ವಿಳಂಬ ಮಾಡಲು ಕಾರಣಗಳೇನು ;

(ಈ) ಅವರಿಗೆ ಬಡ್ತಿ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕಂಪ್ಯೂಟರ್ ಶಿಕ್ಷಕರುಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೪೨೧ (೧೮೧೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಐ.ಸಿ.ಟಿ ಫೇಸ್–೧೧ ಕಂಪ್ಯೂಟರ್ ಶಿಕ್ಷಣ ಯೋಜನೆ ಸ್ಥಗಿತಗೊಂಡು ಇದರಿಂದ ಲಕ್ಷಾಂತರ ವಿದ್ಯಾರ್ಥಿಗಳು ಕಂಪ್ಯೂಟರ್ ಶಿಕ್ಷಣ ವಂಚಿತರಾಗಿರುವುದು ಸರ್ಕಾರಕ್ಕೆ ತಿಳಿದಿದೆಯೇ ;

(ಆ) ಅಲ್ಪ ವೇತನಕ್ಕೆ ೫ ವರ್ಷಗಳಿಂದ ಕೆಲಸ ನಿರ್ವಹಿಸಿದ ಕಂಪ್ಯೂಟರ್ ಶಿಕ್ಷಕರಿಗೆ ೬ ರಿಂದ ೮ ತಿಂಗಳಿನ ವೇತನ ಮತ್ತು ಪಿ.ಎಫ್ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವೇತನ ನೀಡದೇ ಇರುವ ಕಂಪನಿಯ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಕಂಪ್ಯೂಟರ್ ಶಿಕ್ಷಕರು ೪ ತಿಂಗಳುಗಳಿಂದ ಕೆಲಸವಿಲ್ಲದೇ ತುಂಬ ಸಂಕಷ್ಟದಲ್ಲಿದ್ದು, ಸರ್ಕಾರ ಈಗ ಕಾರ್ಯನಿರ್ವಹಿಸುತ್ತಿರುವ ಕಂಪ್ಯೂಟರ್ ಶಿಕ್ಷಕರುಗಳನ್ನು ಮುಂದುವರೆಸಿ ಕನಿಷ್ಠ ಸೇವಾ ಭದ್ರತೆ ಒದಗಿಸಲು ಸರ್ಕಾರ ಚಿಂತಿಸಿದೆಯೇ ?



## ಉತ್ತರ ಕರ್ನಾಟಕದ ಮಹಿಳೆಯರ ಅಭಿವೃದ್ಧಿಗಾಗಿ ವಿಶೇಷ ಸೌಲಭ್ಯ ಒದಗಿಸುವುದು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೨೨ (೧೮೨೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಅಭಿವೃದ್ಧಿ ನಿಟ್ಟಿನಲ್ಲಿ ಉತ್ತರ ಕರ್ನಾಟಕವು ದಕ್ಷಿಣ ಕರ್ನಾಟಕಕ್ಕಿಂತ ಸಾಕಷ್ಟು ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಪ್ರಾದೇಶಿಕ ಅಸಮತೋಲನವನ್ನು ನಿವಾರಿಸಲು ಉತ್ತರ ಕರ್ನಾಟಕದ ಮಹಿಳೆಯರ ಅಭಿವೃದ್ಧಿಗಾಗಿ ವಿಶೇಷ ಕಾರ್ಯ ಯೋಜನೆಯನ್ನು ಸರ್ಕಾರವು ರೂಪಿಸುವುದೇ ;

(ಇ) ಉತ್ತರ ಕರ್ನಾಟಕದಲ್ಲಿ ಹೆಣ್ಣು ಮಕ್ಕಳ ಶಿಕ್ಷಣ, ಆರೋಗ್ಯ ಮತ್ತು ರಕ್ಷಣೆಗಾಗಿ ವಿಶೇಷ ಸೌಲಭ್ಯಗಳನ್ನು ಒದಗಿಸಲಾಗುವುದೆ ?

## ಉತ್ತರ ಕರ್ನಾಟಕದಲ್ಲಿನ ಪ್ರವಾಸಿ ತಾಣಗಳ ಅಭಿವೃದ್ಧಿ ಕುರಿತು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೨೩ (೧೮೨೬) ಮಾನ್ಯ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದ ಹೆಚ್ಚಿನ ಪ್ರವಾಸಿ ತಾಣಗಳ ವಿದೇಶಿ ಮತ್ತು ದೇಶೀಯ ಪ್ರವಾಸಿಗಳನ್ನು ಆಕರ್ಷಿಸಲು ಅಗತ್ಯವಾದ ಮೂಲಭೂತ

ಸೌಕರ್ಯಗಳನ್ನು ಹೊಂದಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಉತ್ತರ ಕರ್ನಾಟಕದಲ್ಲಿನ ಪ್ರವಾಸಿ ತಾಣಗಳಲ್ಲಿ ಮೂಲ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಟೆಕ್‌ಸಾಕ್ ಸಂಸ್ಥೆಯು ಸಿದ್ದಪಡಿಸಿರುವ ಪ್ರಸ್ತಾವನೆಯನ್ನು ಅನುಷ್ಠಾನಗೊಳಿಸಲಾಗುವುದೆ ?

## ಸಾಂಸ್ಕೃತಿಕ ಅಭಿವೃದ್ಧಿ ವಲಯದಲ್ಲಿ ಉತ್ತರ ಕರ್ನಾಟಕಕ್ಕೆ ಸೂಕ್ತ ಪಾಲನ್ನು ನೀಡುವ ಬಗ್ಗೆ

**ಡಾ|| ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೨೪ (೧೮೨೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾಂಸ್ಕೃತಿಕ ಅಭಿವೃದ್ಧಿ ವಲಯದಲ್ಲಿ ಉತ್ತರ ಕರ್ನಾಟಕಕ್ಕೆ ಸೂಕ್ತ ಪಾಲನ್ನು ನೀಡಲಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಿದ್ವಾಂಸರು ಮತ್ತು ಸಾಹಿತಿಗಳಿಗೆ ನೀಡಲಾಗುತ್ತಿರುವ ರಾಜ್ಯ ಪ್ರಶಸ್ತಿ ವಿಷಯದಲ್ಲಿಯೂ ಸಹ ಉತ್ತರ ಕರ್ನಾಟಕಕ್ಕೆ ಅನ್ಯಾಯವಾಗುತ್ತಿಲ್ಲವೆ ;



(ಇ) ಈ ರೀತಿ ಪ್ರಾದೇಶಿಕ ತಾರತಮ್ಯವನ್ನು ನಿವಾರಿಸಲು ಸರ್ಕಾರವು ಯಾವ ಅಗತ್ಯ ಕ್ರಮಗಳನ್ನು ಕೈಗೊಳ್ಳಲಿದೆ ;

(ಈ) ಉತ್ತರ ಕರ್ನಾಟಕದ ಹೆಬ್ಬಾಗಿಲು ಆಗಿರುವ ಬೆಳಗಾವಿಯಲ್ಲಿ ಸಾಂಸ್ಕೃತಿಕ ತರಬೇತಿ ಕೇಂದ್ರವನ್ನು ಸ್ಥಾಪಿಸಲಾಗುವುದೇ ?

## ಗಡಿನಾಡಿನ ಕನ್ನಡ ಶಾಲೆಗಳಲ್ಲಿ ಶಿಕ್ಷಕರು ಮತ್ತು ಕೊಠಡಿಗಳ ಕೊರತೆ ಬಗ್ಗೆ

**ಡಾ|| ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೨೫ (೧೮೨೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗಡಿನಾಡಿನಲ್ಲಿನ ಕನ್ನಡ ಶಾಲೆಗಳಲ್ಲಿ ಶಿಕ್ಷಕರು ಮತ್ತು ಕೊಠಡಿಗಳು ಹಾಗೂ ಮೂಲ ಸೌಲಭ್ಯಗಳ ಕೊರತೆಯಿಂದಾಗಿ ಈ ಭಾಗದ ಶಾಲೆಗಳು ಶೋಚನೀಯ ಸ್ಥಿತಿಯಲ್ಲಿರುವ ಕಾರಣ ವಿದ್ಯಾರ್ಥಿಗಳು ಮಹಾರಾಷ್ಟ್ರದಲ್ಲಿನ ಶಾಲೆಗಳಿಗೆ ವಲಸೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಗಡಿನಾಡಿನ ಕನ್ನಡ ಶಾಲೆಗಳಲ್ಲಿನ ಶಿಕ್ಷಕರು ಮತ್ತು ಶಾಲಾ ಕೊಠಡಿಗಳ ಕೊರತೆಯನ್ನು ನಿವಾರಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ಈ ಬಗ್ಗೆ ವಿಶೇಷ ಕಾರ್ಯ ಯೋಜನೆಯನ್ನು ಸರ್ಕಾರವು ರೂಪಿಸುವುದೆ ?

## ಉತ್ತರ ಕರ್ನಾಟಕದಲ್ಲಿನ ವಸತಿ ಸೌಲಭ್ಯಗಳ ಕೊರತೆ ನಿವಾರಿಸುವುದು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೨೬ (೧೮೨೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದಲ್ಲಿ ವಸತಿ ಕೊರತೆಯು ದಕ್ಷಿಣ ಕರ್ನಾಟಕಕ್ಕಿಂತ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಪ್ರಾದೇಶಿಕ ಅಸಮತೋಲನವನ್ನು ನಿವಾರಿಸಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಳ್ಳುತ್ತಿದೆ ;

(ಇ) ಈ ಭಾಗದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡಗಳ ಸದಸ್ಯರಿಗೆ ವಿಶೇಷ ಆದ್ಯತೆ ಮೇರೆಗೆ ಮನೆ/ನಿವೇಶನ ಹಂಚಿಕೆ ಮಾಡಲಾಗುವುದೆ ?

## ಶುದ್ಧ ಕುಡಿಯುವ ನೀರಿನ ಸೌಲಭ್ಯ

**ಡಾ॥ ಎಂ.ಆರ್. ಹುಲಿನಾಯ್ಕರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೨೭ (೧೮೩೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆಯಲ್ಲಿರುವ ಶುದ್ದ ಕುಡಿಯುವ ನೀರಿನ ಘಟಕಗಳೆಷ್ಟು; ಅವುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವುದೆಷ್ಟು; ದುರಸ್ಥಿಯಲ್ಲಿರುವುದೆಷ್ಟು; ಇವು ಯಾವ ಕಂಪನಿಗಳಿಂದ (Manifactur) ತಯಾರಿಸಲ್ಪಟ್ಟಿದೆ; (ವಿವರ ನೀಡುವುದು)

(ಆ) ೨೦೧೫–೧೬ನೇ ಸಾಲಿನಲ್ಲಿ ಹೊಸದಾಗಿ ನಿಯೋಜಿಸಲ್ಪಟ್ಟ ಹೊಸ ಘಟಕಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)



(ಇ) ಕಳಪೆ ಘಟಕಗಳನ್ನು ಕಳಪೆ ಕಂಪನಿಗಳಿಂದ ಕಪ್ಪು ಪಟ್ಟಿಗೆ ಸೇರಿಸಲು ಕ್ರಮ ಕೈಗೊಳ್ಳಲಾಗುವುದೇ?

## ರಾಯಚೂರು ಜಿಲ್ಲೆಗೆ ಪ್ರವಾಸೋದ್ಯಮ ಇಲಾಖೆ ನೀಡಿದ ಅನುದಾನ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೨೮ (೧೮೩೬) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಇಲ್ಲಿಯವರೆಗೆ ವಿವಿಧ ಪ್ರವಾಸೋದ್ಯಮಗಳಿಗೆ ನೀಡಿದ ಅನುದಾನ ಎಷ್ಟು;

(ಆ) ಹಾಗಿದ್ದಲ್ಲಿ, ಮಾನ್ವಿ ತಾಲ್ಲೂಕಿನ ನೀರಮಾನ್ವಿ ಯಲ್ಲಮ್ಮ ದೇವಸ್ಥಾನದ ಯಾತ್ರಿಕರ ಅನುಕೂಲಕ್ಕಾಗಿ ಯಾತ್ರಿ ನಿವಾಸದ ಪ್ರಸ್ತಾವನೆಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ?

## ರಾಯಚೂರು ಜಿಲ್ಲೆಗೆ ಮಂಜೂರಾದ ವಸತಿ ಮನೆಗಳ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೨೯ (೧೮೩೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ವಿವಿಧ ವಸತಿ ಯೋಜನೆಯಡಿಯಲ್ಲಿ ಮಂಜೂರಾದ ಮನೆಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ೨೦೧೫–೧೬ನೇ ಸಾಲಿಗೆ ರಾಯಚೂರು ಜಿಲ್ಲೆಗೆ ಲಭ್ಯವಾಗುವ ವಿವಿಧ ವಸತಿ ಯೋಜನೆಯಡಿ ಮನೆಗಳು ಎಷ್ಟು ;

(ಇ) ೨೦೦೯ರಲ್ಲಿ ಸಂಭವಿಸಿದ ಪ್ರವಾಹ ಮತ್ತು ಅತಿವೃಷ್ಟಿಯಿಂದ ಕೈಗೊಂಡ ಆಸರೆ ಪುನರ್ ವಸತಿ ಕೇಂದ್ರಗಳು ಎಷ್ಟು ; ಎಷ್ಟು ಮನೆಗಳ ನಿರ್ಮಾಣ ಪೂರ್ಣಗೊಳಿಸಲಾಗಿದೆ ;

(ಈ) ಪೂರ್ಣಗೊಂಡ ವಸತಿಗಳಲ್ಲಿ ಎಷ್ಟು ಜನ ವಾಸ ಮಾಡುತ್ತಿದ್ದಾರೆ;

(ಉ) ಪುನರ್ ವಸತಿ ಬಡಾವಣೆಗಳಲ್ಲಿ ಅನೇಕ ಕಡೆ ಮೂಲಭೂತ ಸೌಲಭ್ಯಗಳು ಸರಿಯಾಗಿ ಇಲ್ಲದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ರಾಯಚೂರು ಜಿಲ್ಲಾ ಪಂಚಾಯತ್ ಮತ್ತು ಕುಡಿಯುವ ನೀರು ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೩೦ (೧೭೩೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಕೆಲವು ಇಲಾಖೆಗಳಲ್ಲಿ ನಿಗದಿತ ಸಮಯಕ್ಕೆ ವೆಚ್ಚ ಮಾಡದ ಹಣ ಎಷ್ಟು;

(ಆ) ರಾಜೀವ್ ಗಾಂಧಿ ಟೆಕ್ನಾಲಜಿ ಮಿಷನ್ ಯೋಜನೆಯಲ್ಲಿ ಕುಡಿಯುವ ನೀರನ್ನು ವಿವಿಧ ಯೋಜನೆಗಳಲ್ಲಿ ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮವೇನು;



(ಇ) ೨೦೧೪–೧೫ ಹಾಗೂ ೨೦೧೫–೧೬ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ರಾಯಚೂರು ಜಿಲ್ಲೆಯ ವಾರ್ತಾ ಭವನ ಹಾಗೂ ಹಜ್ ಯಾತ್ರಿಗಳ ಪಾಸ್‌ಪೋರ್ಟ್ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೩೧ (೧೭೩೫) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರಿನಲ್ಲಿ ವಾರ್ತಾ ಭವನ ನಿರ್ಮಿಸಲು ಈಗಾಗಲೇ ಟೆಂಡರ್ ಕರೆದಿರುವುದು ಸರ್ಕಾರದ ಗಮನದಲ್ಲಿ ಬಂದಿದೆಯೇ ; ಹಾಗಿದ್ದಲ್ಲಿ ವಿಳಂಬವಾಗಲು ಕಾರಣವೇನು ;

(ಆ) ವಾರ್ತಾ ಇಲಾಖೆಯಲ್ಲಿ ಹೈದ್ರಾಬಾದ್ ಕರ್ನಾಟಕದ ಭಾಗದಲ್ಲಿ ಖಾಲಿ ಇರುವ ವಿವಿಧ ಹಂತದ ಅಧಿಕಾರಿಗಳ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮವೇನು ; ಎಷ್ಟು ದಿನದಲ್ಲಿ ಭರ್ತಿ ಮಾಡಲಾಗುವುದು ;

(ಇ) ರಾಯಚೂರು ಜಿಲ್ಲೆಯ ಹಜ್ ಯಾತ್ರಿಗಳಿಗೆ ಪಾಸ್‌ಪೋರ್ಟ್ ಪರಿಶೀಲನೆಗೆ ಬೆಂಗಳೂರು ಮತ್ತು ಹುಬ್ಬಳ್ಳಿ ನಿಗದಿಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಇದರಿಂದ, ರಾಯಚೂರು ಜಿಲ್ಲೆಯ ಹಜ್ ಯಾತ್ರಿಗಳಿಗೆ ತೊಂದರೆ ಆಗುತ್ತಿದ್ದು, ಕಲಬುರಗಿ ಪಾಸ್‌ಪೋರ್ಟ್ ತಪಾಸಣಾ ಕೇಂದ್ರಕ್ಕೆ ರಾಯಚೂರು ಜಿಲ್ಲೆಯ ಹಜ್ ಯಾತ್ರಿಗಳಿಗೆ ಅವಕಾಶ ಕಲ್ಪಿಸಲು ತೊಂದರೆಗಳೇನು ;

(ಉ) ಜಿಲ್ಲೆಯಲ್ಲಿ ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ? (ತಾಲ್ಲೂಕುವಾರು ವಿವರ ನೀಡುವುದು)

## ರಾಯಚೂರು ನಗರದಲ್ಲಿ ಐ.ಐ.ಟಿ. ಸ್ಥಾಪಿಸುವ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೩೭ (೧೮೩೪) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಐ.ಐ.ಟಿ. ಸ್ಥಾಪಿಸಲು ಈಗಾಗಲೇ ರಾಯಚೂರು, ಧಾರವಾಡ ಮತ್ತು ಮೈಸೂರು ಜಿಲ್ಲೆಗಳ ಹೆಸರುಗಳ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿರುವುದು ನಿಜವೆ;

(ಆ) ಹಾಗಿದ್ದಲ್ಲಿ, ಈಗಾಗಲೇ ಮೂರು ಜಿಲ್ಲೆಗಳ ಮೂಲಭೂತ ಸೌಲಭ್ಯಗಳ ಬಗ್ಗೆ ಜಿಲ್ಲಾಡಳಿತದಿಂದ ಮಾಹಿತಿ ಬಂದಿದೆಯೇ;

(ಇ) ಹಾಗಿದ್ದಲ್ಲಿ, ರಾಜ್ಯ ಸರ್ಕಾರ ಮುಂದೆ ತೆಗೆದುಕೊಳ್ಳಬೇಕಾದ ಕ್ರಮವೇನು;

(ಈ) ಐ.ಐ.ಟಿ. ಸ್ಥಾಪಿಸಲು ಆದ್ಯತೆ ನೀಡುವ ಕುರಿತು ಕೇಂದ್ರ ಮತ್ತು ರಾಜ್ಯ ಸರ್ಕಾರದ ಮುಂದೆ ಇರುವ ಮಾನದಂಡಗಳೇನು ;

(ಉ) ಈಗಾಗಲೇ, ಹಿಂದಿನ ರಾಜ್ಯ ಸರ್ಕಾರದ ಸಚಿವ ಸಂಪುಟದ ತೀರ್ಮಾನ ಹಾಗೂ ಡಾ॥ ನಂಜುಂಡಪ್ಪ ವರದಿಯ ಶಿಫಾರಸ್ಸಿಗೆ ಅನುಗುಣವಾಗಿ ರಾಯಚೂರಿನಲ್ಲಿ ಐ.ಐ.ಟಿ. ಸ್ಥಾಪಿಸಲು ಕ್ರಮ ಕೈಗೊಳ್ಳುವುದೇ ?



## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗೆ ಕಳೆದ ೩ ವರ್ಷಗಳಿಂದ ಆರ್.ಡಿ.ಪಿ.ಎ.ಆರ್. ಬಿಡುಗಡೆ ಹಣದ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೩೩ (೧೮೩೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಬಿಡುಗಡೆಯಾದ ಅನುದಾನ ಎಷ್ಟು ; ಬಳಕೆಯಾದ ಅನುದಾನ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ಈ ಅನುದಾನದಲ್ಲಿ ಕೈಗೊಳ್ಳಲಾಗಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳು ಯಾವ ಹಂತದಲ್ಲಿವೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಪ್ರವಾಸಿ ತಾಣಗಳ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೩೪ (೧೮೪೦) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಪ್ರವಾಸಿ ತಾಣಗಳನ್ನು ಗುರುತಿಸಲಾಗಿದೆಯೇ; ಅವು ಯಾವುವು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಪ್ರವಾಸಿ ತಾಣಗಳ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ; ಈ ತಾಣಗಳ ಅಭಿವೃದ್ಧಿಗೆ ೨೦೧೪–೧೫ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಪ್ರಾಥಮಿಕ ಶಾಲೆಗಳ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೩೫ (೧೮೪೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಕಡಿಮೆಯಾಗಲು ಕಾರಣಗಳೇನು ;

(ಇ) ಈ ಶಾಲಾ ಕಟ್ಟಡಗಳಿಗೆ ೨೦೧೩–೨೦೧೪ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ? (ಶಾಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

## ರಾಜ್ಯದ ಹಿರಿಯ ನಾಗರಿಕರಿಗೆ ಇರುವ ಸೌಲಭ್ಯಗಳ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೧೪೩೬ (೧೮೪೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಹಿರಿಯ ನಾಗರಿಕರಿಗೆ ರಾಜ್ಯ ಸರ್ಕಾರ ಏನೇನು ಸೌಲಭ್ಯಗಳನ್ನು ನೀಡುತ್ತಿದೆ ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ಜಿಲ್ಲಾ ಆಸ್ಪತ್ರೆಗಳಲ್ಲಿ /ಜಿರಿಯಾಟ್ರಿಕ್ ಕೇಂದ್ರ ಪ್ರಾರಂಭಿಸಲಾಗಿದೆ ; ಮತ್ತು ಇಂತಹ ಕೇಂದ್ರಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂಬ ದೂರುಗಳು ಇರುವುದು ನಿಜವೇ ?



## ಸರ್ಕಾರಿ ಪ್ರೌಢಶಾಲಾ ಚಿತ್ರಕಲಾ ಶಿಕ್ಷಕರ ಪದೋನ್ನತಿ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೧೪೩೭ (೧೮೪೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಎ.ಎಂ.ಜಿ.ಡಿ ಪದವಿ ಹೊಂದಿ ನೇಮಕಗೊಂಡ ಚಿತ್ರಕಲಾ ಶಿಕ್ಷಕರಿಗೆ ೨೦–೨೫ ವರ್ಷಗಳ ಸೇವೆ ಸಲ್ಲಿಸಿದ್ದರೂ ಯಾವುದೇ ಪದೋನ್ನತಿ ನೀಡಿರುವುದಿಲ್ಲ ಎಂಬ ದೂರುಗಳು ಇರುವುದು ನಿಜವೇ;

(ಆ) ಹಾಗಿದ್ದಲ್ಲಿ, ಸರ್ಕಾರಿ ಪ್ರೌಢಶಾಲಾ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮದಲ್ಲಿ ಚಿತ್ರಕಲಾ ಶಿಕ್ಷಕರ ಪದೋನ್ನತಿಗೆ ಅವಕಾಶ ಕಲ್ಪಿಸಿಲ್ಲವೆ;

(ಇ) ಸರ್ಕಾರಿ ಪ್ರೌಢಶಾಲೆಗಳಲ್ಲಿ ಕ್ರಾಫ್ಟ್ ಶಿಕ್ಷಕರೆಂದು ಸೇವೆ ಸಲ್ಲಿಸಿದವರಿಗೆ ವಿಷಯ ಪರಿವೀಕ್ಷಕರೆಂದು ಪದೋನ್ನತಿ ನೀಡಲಾಗುತ್ತಿದೆಯೇ?

## ಶಿಕ್ಷಕರ ನೇಮಕಾತಿ ಸ್ಥಗಿತಗೊಂಡಿರುವುದರಿಂದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ಕುರಿತು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೪೩೮ (೧೮೪೬) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳೆಷ್ಟು; (ತಾಲ್ಲೂಕು ಮತ್ತು ಗ್ರಾಮದಲ್ಲಿರುವ ಬಗ್ಗೆ ವಿವರ ನೀಡುವುದು)

(ಆ) ಈ ಕಾಲೇಜುಗಳಲ್ಲಿ ಖಾಯಂ ಪ್ರಾಚಾರ್ಯರುಗಳಿಲ್ಲದೆ ಇರುವ ಸಂಗತಿ ನಿಜವೇ;

(ಇ) ಹಾಗಿದ್ದಲ್ಲಿ, ಆ ಕಾಲೇಜುಗಳ ಹೆಸರು, ಪ್ರಾಚಾರ್ಯರ ಹೆಸರು ದೂರವಾಣಿ ಸಂಖ್ಯೆಗಳನ್ನೊಳಗೊಂಡಂತೆ ವಿಳಾಸ ಒದಗಿಸುವುದು;

(ಈ) ಖಾಯಂ ಪ್ರಾಚಾರ್ಯರು ಹಾಗೂ ಶಿಕ್ಷಕರು ಕೆಲವು ಕಾಲೇಜುಗಳಲ್ಲಿ ಇರದೇ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ಕೂಡಲೇ ಖಾಲಿ ಇರುವ ಹುದ್ದೆ ತುಂಬಲು ಕ್ರಮ ಕೈಗೊಳ್ಳಲಾಗುವುದೇ;

(ಊ) ಬೆಳಗಾವಿ ಜಿಲ್ಲೆ, ಅಥಣಿ ತಾಲ್ಲೂಕಿನ ಐನಾಪುರ ಹಾಗೂ ಬೈಲಹೊಂಗಲ ತಾಲ್ಲೂಕಿನ ನೇಸರಗಿ ಮತ್ತು ಬೈಲಹೊಂಗಲದ ಕಾಲೇಜುಗಳಲ್ಲಿ ಶಿಕ್ಷಕರ ಕೊರತೆ ಇದ್ದು, ಹುದ್ದೆ ತುಂಬಲು ಕ್ರಮ ಕೈಗೊಳ್ಳಲಾಗುವುದೇ?

## ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೪೫೯ (೧೮೪೯) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಬೆಳವಡಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ ಇಲ್ಲದೆ ಇರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;



(ಆ) ಹಾಗಿದ್ದಲ್ಲಿ, ಇಲ್ಲಿ ಕಾಲೇಜು ಪ್ರಾರಂಭಿಸಲು ಪರಿಶೀಲಿಸಲಾಗುವುದೇ;

(ಇ) ಗ್ರಾಮ ಪಂಚಾಯಿತಿಯವರು ಎಲ್ಲಾ ಮೂಲಭೂತ ಸೌಕರ್ಯ ಒದಗಿಸಲು ಸಿದ್ದರಿದ್ದು ಸರ್ಕಾರವು ಪರಿಶೀಲಿಸಿ ಕಾಲೇಜು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ;

(ಈ) ಇಲ್ಲಿ ಕಾಲೇಜು ಇಲ್ಲದೆ ಇರುವುದರಿಂದ ವಿದ್ಯಾರ್ಥಿಗಳು ಬೆಳಗಾವಿ ಅಥವಾ ಬೈಲಹೊಂಗಲಕ್ಕೆ ಹೋಗಿ ಬರುತ್ತಿದ್ದು, ಇದರಿಂದ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ಕಾಲೇಜು ಪ್ರಾರಂಭಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದೇ?

## ವಾರ್ತಾ ಭವನ ಕಟ್ಟುವುದು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೪೪೦ (೧೮೪೨) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ನಗರದಲ್ಲಿ ಕಂದಾಯ, ವಾಣಿಜ್ಯ ಮತ್ತು ಪೊಲೀಸ್ ಉಪ ವಿಭಾಗ ಇದ್ದ ಸಂಗತಿ ನಿಜವೇ;

(ಆ) ಬೈಲಹೊಂಗಲ ನಗರದಲ್ಲಿ ವಾರ್ತಾ ಭವನ ಕಟ್ಟಡ ಇಲ್ಲದೆ ಇರುವ ಸಂಗತಿ ನಿಜವೇ;

(ಇ) ವಾರ್ತಾ ಭವನ ಕಟ್ಟಡ ಇಲ್ಲದೆ ಇರುವುದರಿಂದ ವರದಿಗಾರರಿಗೆ ತುಂಬಾ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸ್ಥಳೀಯ ವಿಧಾನ ಪರಿಷತ್ ಸದಸ್ಯರು

ವಾರ್ತಾ ಸಚಿವರಿಗೆ ವಾರ್ತಾ ಭವನ ಕಟ್ಟಡ ಕಟ್ಟಲು ಪತ್ರ ಬರೆದು ಕೋರಿಕೊಂಡಿದ್ದು ಈಗ ಅದು ಯಾವ ಹಂತದಲ್ಲಿದೆ;

(ಈ) ಹಾಗಿದ್ದಲ್ಲಿ, ವಾರ್ತಾ ಭವನ ಕಟ್ಟಡ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ?

## ಶಿಕ್ಷಕರ ನೇಮಕಾತಿ ಸ್ಥಗಿತಗೊಳಿಸಿರುವುದರಿಂದ ಅನುದಾನಿತ ಹಾಗೂ ಅನುದಾನ ರಹಿತ ಪದವಿ ಕಾಲೇಜುಗಳ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೪೪೧ (೧೮೪೮) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಎಷ್ಟು ಅನುದಾನಿತ ಹಾಗೂ ಅನುದಾನ ರಹಿತ ಪದವಿ ಕಾಲೇಜುಗಳಿವೆ; (ಕಾಲೇಜು ನಡೆಸುತ್ತಿರುವ ಸಂಸ್ಥೆಯ ಹೆಸರು, ಗ್ರಾಮ ಹಾಗೂ ವಿಳಾಸ ಒದಗಿಸುವುದು)

(ಆ) ಈ ಕಾಲೇಜುಗಳಲ್ಲಿ ಖಾಯಂ ಪ್ರಾಚಾರ್ಯರ ಹುದ್ದೆ ಖಾಲಿ ಇರುವುದರಿಂದ ಅಥವಾ ಪ್ರಭಾರಿಯಾಗಿ ಇರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;



(ಇ) ಹಾಗಿದ್ದಲ್ಲಿ, ಈಗ ಕೆಲಸ ಮಾಡುತ್ತಿರುವ ಕಾಲೇಜುಗಳ ಹೆಸರು, ಪ್ರಾಚಾರ್ಯರ ಹೆಸರು, ವಿಳಾಸ, ದೂರವಾಣಿ ಸಂಖ್ಯೆ ಒದಗಿಸುವುದು;

(ಈ) ಈ ಕಾಲೇಜುಗಳಲ್ಲಿ ಕೆಲಸ ಮಾಡದೇ ಇದ್ದರೂ ಪ್ರಾಚಾರ್ಯರ ಬೋಗಸ್ ಹೆಸರಿನ ಮೇಲೆ ಕಾಲೇಜು ನಡೆಸುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ಕೂಡಲೇ ಹುದ್ದೆ ತುಂಬಲು ಕ್ರಮ ಕೈಗೊಳ್ಳಲಾಗುವುದೇ ?

## "ಗ್ರಾಮವಿಕಾಸ" ಯೋಜನೆಯ ಕಾಮಗಾರಿಗಳು ಹಣ ಬಿಡುಗಡೆ ಮತ್ತು ಅನುಷ್ಠಾನದ ಅವಧಿ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೪೪೨ (೧೮೫೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ಗ್ರಾಮ ವಿಕಾಸ" ಯೋಜನೆಯಲ್ಲಿ ಕೈಗೊಳ್ಳಲು ಸೂಚಿಸಿರುವ ಕಾಮಗಾರಿಗಳು ಯಾವುವು;

(ಆ) ೨೦೧೫–೧೬ನೇ ಸಾಲಿನಲ್ಲಿ ಎಷ್ಟು ಗ್ರಾಮಗಳನ್ನು ಕೈಗೆತ್ತಿಕೊಳ್ಳಲಾಗುತ್ತದೆ;

(ಇ) ಈ ಯೋಜನೆಗೆ ಅಗತ್ಯವಿರುವ ಹಣವೆಷ್ಟು? (ಹಣ ಬಿಡುಗಡೆ ಮತ್ತು ಅನುಷ್ಠಾನದ ಅವಧಿ ಕುರಿತು ವಿವರ ನೀಡುವುದು)

## ಭೂಸ್ವಾಧೀನ ಪರಿಹಾರ ನೀಡುವ ಪ್ರಕ್ರಿಯೆಯಲ್ಲಿ ಕರ್ನಾಟಕ ಗೃಹ ಮಂಡಳಿಯಿಂದ ಮೈಸೂರಿನ ರೈತರಿಗೆ ಆಗಿರುವ ಅನ್ಯಾಯದ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೪೪೩ (೧೮೫೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರಿನಲ್ಲಿ ವಸತಿ ಯೋಜನೆಗಾಗಿ ಕರ್ನಾಟಕ ಗೃಹ ಮಂಡಳಿಯು ರೈತರಿಂದ ಜಮೀನು ವಶಪಡಿಸಿಕೊಂಡಿರುವುದು ನಿಜವೇ;

(ಆ) ರೈತರಿಂದ ವಶಪಡಿಸಿಕೊಂಡ ಭೂಮಿಯ ಪ್ರಮಾಣವೆಷ್ಟು; ಇದಕ್ಕೆ ನೀಡಲಾಗಿರುವ ಪರಿಹಾರವೆಷ್ಟು;

(ಇ) ರೈತರಿಗೆ ನೀಡಿರುವ ಪರಿಹಾರದಲ್ಲಿ ವಂಚನೆ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ಸಂಬಂಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ;

(ಉ) ರೈತರಿಗೆ ಸೇರಬೇಕಾಗಿರುವ ಜಮೀನಿನ ಪೂರ್ತಿ ಹಣವನ್ನು ದೊರಕಿಸಿಕೊಡಲು ಸರ್ಕಾರವು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ?



## ಸಾಕಷ್ಟು ಶಾಲೆಗಳಲ್ಲಿ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯನ್ನು ಇನ್ನೂ ರಚಿಸದಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೪೪೪ (೧೮೫೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯನ್ನು ರಾಜ್ಯದ ಎಷ್ಟು ಶಾಲೆಗಳಲ್ಲಿ ರಚಿಸಲಾಗಿದೆ;

(ಆ) ಈ ಸಮಿತಿಗಳನ್ನು ಯಾವ ವರ್ಷದಲ್ಲಿ ರಚಿಸಲಾಯಿತು; ಸಮಿತಿಯ ಕುರಿತು ಸಂಕ್ಷಿಪ್ತ ವಿವರ ನೀಡುವುದು;

(ಇ) ಈ ಸಮಿತಿಗಳ ಪ್ರಮುಖ ಕಾರ್ಯಗಳೇನು; ನಿರೀಕ್ಷಿತ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿವೆಯೇ;

(ಈ) ಸದರಿ ಸಮಿತಿಯನ್ನು ರಚಿಸದ ಶಾಲೆಗಳ ಸಂಖ್ಯೆ ಎಷ್ಟು; ಇದುವರೆವಿಗೂ ರಚಿಸದಿರಲು ಕಾರಣವೇನು ?

## ಶಾಲೆಗಳಲ್ಲಿ ಶೌಚಾಲಯದ ವ್ಯವಸ್ಥೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೪೪೫ (೧೮೫೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧ ರಿಂದ ೧೦ನೇ ತರಗತಿಯವರೆಗಿನ ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳಿಲ್ಲದಿರುವ ಶಾಲೆಗಳ ಸಂಖ್ಯೆ ಎಷ್ಟು; ಅವು ಯಾವುವು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬಿಸಿಯೂಟ ತಯಾರಿಸುತ್ತಿದ್ದು ಅದಕ್ಕೆ ಅಗತ್ಯವಿರುವ ಪಡಿತರ ಸಂಗ್ರಹ ಕೊಠಡಿ ಮತ್ತು ಅಡಿಗೆ ಮನೆ ಇಲ್ಲದಿರುವ ಶಾಲೆಗಳ ಸಂಖ್ಯೆ ಎಷ್ಟು; ಅವು ಯಾವುವು? (ಜಿಲ್ಲಾವಾರು ಮಾಹಿತಿ ನೀಡುವುದು)

## ವೃತ್ತಿ ಶಿಕ್ಷಣ ಪ್ರವೇಶ ಶುಲ್ಕದಲ್ಲಿ ಹೆಚ್ಚುವರಿ ಮಾಡಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೪೪೬ (೧೮೫೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವೃತ್ತಿ ಶಿಕ್ಷಣ ಪ್ರವೇಶ ಶುಲ್ಕ ೨೦೧೪–೧೫ರಲ್ಲಿ ಎಷ್ಟಿತ್ತು; (ವಿವರ ನೀಡುವುದು)

(ಆ) ಈ ಬಾರಿ ವೃತ್ತಿ ಶಿಕ್ಷಣ ಪ್ರವೇಶ ಶುಲ್ಕದಲ್ಲಿ ಹೆಚ್ಚುವರಿ ಮಾಡಲಾಗಿದೆಯೇ; ಇದಕ್ಕೆ ಕಾರಣವೇನು;

(ಇ) ವೃತ್ತಿ ಶಿಕ್ಷಣ ಪ್ರವೇಶ ಪರೀಕ್ಷೆಯ ಒಟ್ಟಾರೆ ಪ್ರಕ್ರಿಯೆಯಲ್ಲಿ ಹೆಚ್ಚುವರಿ ಬದಲಾವಣೆ ಮಾಡಲಾಗಿದೆಯೇ; ಇಲ್ಲವಾದಲ್ಲಿ ಪ್ರವೇಶ ಶುಲ್ಕದಲ್ಲಿ ಶೇಕಡಾ ೨೦ ರಿಂದ ೩೦ ರಷ್ಟು ಏರಿಸಲು ಕಾರಣವೇನು;

(ಈ) ಈ ಶುಲ್ಕವನ್ನು ಮೊದಲಿನಂತೆ ನಿಗಧಿ ಪಡಿಸಲು ಸಾಧ್ಯವಿಲ್ಲವೇ?



## ಚಿಕ್ಕೋಡಿ ಜಿಲ್ಲೆಯಲ್ಲಿ ಉಪ ನಿರ್ದೇಶಕರ ಕಚೇರಿ ಪ್ರಾರಂಭಿಸುವ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೪೪೭ (೧೮೬೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ಉಪ ನಿರ್ದೇಶಕರ ಕಚೇರಿಯಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಕೈಗೊಂಡ ಕ್ರಮವೇನು ;

(ಆ) ಚಿಕ್ಕೋಡಿ ನಗರದಲ್ಲಿ ಉಪ ನಿರ್ದೇಶಕರ ಪದವಿ ಪೂರ್ವ ಶಿಕ್ಷಣ ಇಲಾಖೆ, ಕಚೇರಿ ಪ್ರಾರಂಭಿಸಲು ಸರ್ಕಾರ ಉದ್ದೇಶಿಸಿದೆಯೇ; ಉದ್ದೇಶಿಸಿದ್ದಲ್ಲಿ ಪ್ರಾರಂಭಿಸಲಾಗುವುದು ಯಾವಾಗ;

(ಇ) ಬೆಳಗಾವಿ ಜಿಲ್ಲೆಯ ಸರ್ಕಾರಿ, ಖಾಸಗಿ ಅನುದಾನಿತ, ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಸಂಯೋಜನವಾರು, ವಿಭಾಗವಾರು ಮತ್ತು ಕಾಲೇಜುವಾರು ವಿವರ ನೀಡುವುದು)

(ಈ) ೦೫ ವರ್ಷಗಳ ದಾಖಲಾತಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ದಾಖಲಾತಿ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಪದವಿಯಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೪೪೮ (೧೮೫೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ಸರ್ಕಾರಿ ಹಾಗೂ ಖಾಸಗಿ, ಅನುದಾನಿತ, ಅನುದಾನ ರಹಿತ ಪದವಿಯಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಸದರಿ ಕಾಲೇಜುಗಳಲ್ಲಿ ಈಗಾಗಲೇ ನಿವೃತ್ತಿ, ನಿಧನ, ರಾಜೀನಾಮೆಯಿಂದ ಖಾಲಿಯಾಗಿರುವ ಅನುದಾನಿತ ಹುದ್ದೆಗಳ ವಿಷಯವಾರು ಸಂಖ್ಯೆ ಎಷ್ಟು ; (ದಿನಾಂಕ: ೩೦–೫–೨೦೧೫ ರಂತೆ ಕಾಲೇಜುವಾರು ಮಾಹಿತಿ ನೀಡುವುದು)

(ಇ) ಖಾಸಗಿ ಅನುದಾನಿತ, ಪದವಿ ಪೂರ್ವ ಕಾಲೇಜುಗಳಲ್ಲಿ ಸೇವೆ ಸಲ್ಲಿಸುವಾಗ ನಿಧನ ಹೊಂದಿದ ಬೋಧಕ ಬೋಧಕೇತರ ಸಿಬ್ಬಂದಿಗಳ ಕುಟುಂಬಕ್ಕೆ ಅನುಕಂಪದ ಆಧಾರದ ಮೇರೆಗೆ ನೇಮಕಾತಿಗಾಗಿ ಬಂದ ಅರ್ಜಿಗಳೆಷ್ಟು; ನೇಮಕಾತಿಯನ್ನು ಅನುದಾನ ಸಹಿತವಾಗಿ ಅನುಮೋದನೆಗೊಂಡವರ ಕಾಲೇಜುವಾರು ವಿವರ ನೀಡುವುದು ?

## ಗ್ರಂಥಪಾಲಕರ ವೇತನದ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೪೪೯ (೧೮೫೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳ ಯಾವ ಯಾವ ಕಾಲೇಜಿನ ಗ್ರಂಥಪಾಲಕರು ಯಾವ ಯಾವ ವೇತನ



ಶ್ರೇಣಿಯಲ್ಲಿ ಸಂಬಳ ಪಡೆಯುತ್ತಿದ್ದಾರೆ. (ಪ್ರತಿಯೊಬ್ಬರ ವಿವರ ನೀಡುವುದು)

(ಆ) ಬದಲಾದ ವೇತನ ಶ್ರೇಣಿಯನ್ನು ಕೆಲವರಿಗೆ ನೀಡಿ ಇನ್ನು ಕೆಲವರಿಗೆ ನೀಡದಿರಲು ಕಾರಣವೇನು;

(ಇ) ಎಲ್ಲರಿಗೂ ಸಮನಾಗಿ ನೀಡಲು ಸರ್ಕಾರ ತೆಗೆದುಕೊಳ್ಳುವ ಕ್ರಮವೇನು ?

## ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿ ಶಿಕ್ಷಕರ ಅನುಪಾತದ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೪೫೦ (೧೮೫೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿ / ಶಿಕ್ಷಕರ ಅನುಪಾತದ ಕುರಿತು ಇರುವ ನಿಯಮಾವಳಿಗಳು ಏನು;

(ಆ) ವಿದ್ಯಾರ್ಥಿ / ಶಿಕ್ಷಕರ ಅನುಪಾತದ ಕುರಿತು RMSA ನಿಯಮಾವಳಿ ಏನು;

(ಇ) CBSE ನಿಯಮಾವಳಿಗಳು ಏನು;

(ಈ) ವಿದ್ಯಾರ್ಥಿ / ಶಿಕ್ಷಕರ ಅನುಪಾತವನ್ನು ೧:೪೦ ಮಾಡಬೇಕೆನ್ನುವ ಶಿಕ್ಷಕ ಸಂಘಟನೆಯ ಬೇಡಿಕೆಗೆ ಸರ್ಕಾರದ ನಿಲುವೇನು ;

(ಉ) ಈಗಿರುವ ವಿದ್ಯಾರ್ಥಿ / ಶಿಕ್ಷಕರ ಅನುಪಾತವು CCE ಮಾದರಿಯ ಬೋಧನೆಗೆ ಬಹಳ ದೊಡ್ಡ ತೊಂದರೆಯಾಗಿರುವುದು ಸರ್ಕಾರ ಗಮನಿಸಿದೆಯೇ; ಗಮನಿಸಿದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು?

## ಗ್ರಾಮೀಣ ಪ್ರದೇಶಗಳನ್ನು ನಿಗಧಿಪಡಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೪೫೧ (೧೮೬೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವೃತ್ತಿ ಶಿಕ್ಷಣ ಕೋರ್ಸುಗಳಿಗೆ ಪ್ರವೇಶ ನೀಡುವ ಬಗ್ಗೆ ಹಾಗೂ ನೇಮಕಾತಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ೨೦೧೫–೧೬ನೇ ಸಾಲಿನಲ್ಲಿ ಪ್ರಕಟಿಸಿರುವ ಕೈಪಿಡಿಯಲ್ಲಿ ಗ್ರಾಮೀಣ ಪ್ರದೇಶಗಳನ್ನು ನಿಗಧಿಪಡಿಸಿ ಪ್ರಕಟಿಸಲಾಗಿದೆಯೇ;

(ಆ) ಹಾಗಿದ್ದಲ್ಲಿ, ಗ್ರಾಮೀಣ ಪ್ರದೇಶಗಳೆಂದು ಪ್ರಕಟಿಸಿದ ಪ್ರದೇಶಗಳ ಬಗ್ಗೆ ಮಾಹಿತಿ ನೀಡಿದ ಸಕ್ಷಮ ಪ್ರಾಧಿಕಾರ ಯಾವುದು;

(ಇ) ಈ ಮಾಹಿತಿಯು ಕರಾರುವಕ್ಕಾಗಿ ಹಾಗೂ ಕಾನೂನಿನನ್ವಯ ಸರಿ ಇದೆಯೇ;

(ಈ) ಈ ಕುರಿತು ನಗರಾಭಿವೃದ್ಧಿ ಇಲಾಖೆಯಿಂದ ನಿಖರವಾದ ಮಾಹಿತಿ ಪಡೆಯಲಾಗಿದೆಯೇ;

(ಉ) ಯಾವ ದಿನಾಂಕದಂದು ಮಾಹಿತಿ ಪಡೆಯಲಾಗಿದೆ? (ಈ ಬಗ್ಗೆ ವಿವರವಾದ ಮಾಹಿತಿ ಕೊಡುವುದು)

## ಪ್ರೌಢಶಾಲಾ ವಿಭಾಗಗಳು ಹಾಗೂ ಅವುಗಳಿಗೆ ಸಂಬಂಧಪಟ್ಟ ಪ್ರಕರಣಗಳ ವಿವರ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೪೫೨ (೧೮೬೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಪ್ರೌಢಶಾಲಾ ವಿಭಾಗಗಳು ಎಷ್ಟು; ಅವು ಯಾವುವು;



(ಆ) ಸದರಿ ವಿಭಾಗಗಳಲ್ಲಿ ಪ್ರೌಢಶಾಲಾ ಶಿಕ್ಷಕರ ನೇಮಕಾತಿಗಳಲ್ಲಿ ಗ್ರಾಮೀಣ ಅಭ್ಯರ್ಥಿ ಗುರುತಿಸುವ ಸಂಬಂಧ ವಿವಾದ ಪ್ರಕರಣಗಳು ಉದ್ಭವಿಸಿವೆಯೇ:

(ಇ) ೨೦೦೨ನೇ ಸಾಲಿನಿಂದ ಇಲ್ಲಿಯವರೆಗೆ ಎಷ್ಟು ಪ್ರಕರಣಗಳು ಉದ್ಭವಿಸಿವೆ; (ವಿಭಾಗವಾರು, ವರ್ಷವಾರು ವಿವಾದದ ಪ್ರದೇಶಗಳನ್ನೊಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಈ) ಸದರಿ ವಿವಾದಕ್ಕೆ ಸಂಬಂಧಿಸಿದಂತೆ ಎಷ್ಟು ಪ್ರಕರಣಗಳು ಹಾಲಿ, ಯಾವ ಯಾವ ನ್ಯಾಯಾಲಯಗಳಲ್ಲಿ ಬಾಕಿ ಇವೆ; ತೀರ್ಪು ಬಂದ ಪ್ರಕರಣಗಳು ಎಷ್ಟು ? (ವಿವರವಾದ ಮಾಹಿತಿ ನೀಡುವುದು)

## ಪ್ರವಾಸಿ ಟ್ಯಾಕ್ಸಿಗಳಿಂದ ಸೇವಾ ಶುಲ್ಕ ವಸೂಲು ಮಾಡುತ್ತಿರುವ ಬಗ್ಗೆ.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೪೫೩ (೧೮೬೩) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆಂಪೇಗೌಡ ಅಂತರ್‌ರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಕಾರ್ಯನಿರ್ವಹಿಸುತ್ತಿರುವ ಪ್ರವಾಸಿ ಟ್ಯಾಕ್ಸಿಗಳ ಸಂಖ್ಯೆ ಎಷ್ಟು;

(ಆ) ಈ ಪ್ರವಾಸಿ ಟ್ಯಾಕ್ಸಿಗಳಿಂದ ಸೇವಾ ತೆರಿಗೆಯನ್ನು ಈಗ ವಸೂಲು ಮಾಡಲಾಗುತ್ತಿದೆಯೇ;

(ಇ) ಸೇವಾ ತೆರಿಗೆಯ ಮೊತ್ತವನ್ನು ಪ್ರವಾಸಿ ಟ್ಯಾಕ್ಸಿಗಳ ಮೀಟರಿನಲ್ಲಿ ಅಳವಡಿಸದಿರಲು ಕಾರಣಗಳೇನು;

(ಈ) ಮೀಟರಿನಲ್ಲಿ ಸೇವಾ ತೆರಿಗೆಯನ್ನು ಅಳವಡಿಸಲು ಸರ್ಕಾರ ಯಾವಾಗ ಕ್ರಮಕೈಗೊಳ್ಳಲಿದೆ;

(ಉ) ಮೀಟರಿನಲ್ಲಿ ಸೇವಾತೆರಿಗೆಯನ್ನು ಅಳವಡಿಸುವವರೆಗೆ ಪ್ರವಾಸಿ ಟ್ಯಾಕ್ಸಿಗಳಿಂದ ಸೇವಾ ತೆರಿಗೆ ವಸೂಲಿ ಮಾಡದಿರಲು ಸರ್ಕಾರ ನಿರ್ಧರಿಸಿದೆಯೇ;

(ಊ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಆದೇಶ ಹೊರಡಿಸಲಾಗುವುದು ಯಾವಾಗ ?

## ನಬಾರ್ಡ್ ನೆರವಿನ ಯೋಜನೆಗಳು.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೪೫೪ (೧೮೬೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಯಾವ ಯಾವ ಯೋಜನೆಗಳು ನಬಾರ್ಡ್ ನೆರವಿನೊಂದಿಗೆ ಜಾರಿಯಲ್ಲಿವೆ; (ಯೋಜನಾವಾರು ವಿವರವಾದ ಮಾಹಿತಿ ನೀಡುವುದು)



(ಆ) ಸದರಿ ಯೋಜನೆಯಡಿ ಯಾವ N.G.O.ಗಳನ್ನು ಯೋಜನೆ ಕಾರ್ಯಗತಗೊಳಿಸಲು ಬಳಸಿಕೊಳ್ಳಲಾಗಿದೆ; (ಜಿಲ್ಲಾವಾರು N.G.O.ಗಳನ್ನೊಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಇ) ಈ ಇಲಾಖೆಯ ಸಹಯೋಗದೊಂದಿಗೆ N.G.O.ಗಳು ನಬಾರ್ಡ್‌ನಂದ ಪ್ರತಿ ತಿಂಗಳು ಎಷ್ಟು ಹಣವನ್ನು ಯಾವ ಕೆಲಸಕ್ಕಾಗಿ ಪಡೆಯುತ್ತಿವೆ ? (ಜಿಲ್ಲಾವಾರು N.G.O.ವಾರು ವಿವರವಾದ ಮಾಹಿತಿ ಕೊಡುವುದು)

## ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳು ಸರ್ಕಾರಿ ಆದೇಶ ಪಾಲಿಸುವುದು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೪೫೫ (೧೮೬೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಉರ್ದು ಮತ್ತು ಇತರೆ ಭಾಷಾ ಅಲ್ಪಸಂಖ್ಯಾತರ ನಿರ್ದೇಶನಾಲಯವು ಮಾನ್ಯತೆ ನೀಡಿರುವ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಧಾರ್ಮಿಕ ಹಾಗೂ ಭಾಷಾ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳ ವಿವರ ನೀಡುವುದು)

(ಆ) ರಾಷ್ಟ್ರೀಯ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳ ಆಯೋಗವು ರಾಜ್ಯದಲ್ಲಿ ಮಾನ್ಯತೆ ನೀಡಿರುವ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಷ್ಟ್ರೀಯ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳ ಆಯೋಗದಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳು ಸರ್ಕಾರದ ಆದೇಶ ಸಂಖ್ಯೆ ಇಡಿ೨೭ ಮಾಹಿತಿ ೨೦೧೨ (ಭಾಗ-೧) ದಿ.೧೮-೦೬-೨೦೧೪ ರಲ್ಲಿ ಷರತ್ತುಗಳನ್ನು ಪೂರೈಸುವುದು ಕಡ್ಡಾಯವೇ;

(ಈ) ದಿ.೧೮-೦೬-೨೦೧೪ರ ಸರ್ಕಾರಿ ಆದೇಶದ ಷರತ್ತು ಸಂಖ್ಯೆ ೯ನ್ನು ಎಷ್ಟು ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳು ಪಾಲಿಸಿವೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಅಲ್ಪಸಂಖ್ಯಾತರ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳಲ್ಲಿ ಸರ್ಕಾರಿ ಆದೇಶದ ಪ್ರಕಾರ ಆಯಾ ಧರ್ಮದ ಹಾಗೂ ಭಾಷೆಯ ಶೇಕಡಾ ೨೫ ರಷ್ಟು ವಿದ್ಯಾರ್ಥಿಗಳಿಗೆ ಕಡ್ಡಾಯವಾಗಿ ಪ್ರವೇಶ ನೀಡಲಾಗಿದೆಯೇ;

(ಊ) ಈ ಆದೇಶ ಪಾಲನೆಗೆ ಉರ್ದು ಮತ್ತು ಇತರೆ ಭಾಷಾ ಅಲ್ಪಸಂಖ್ಯಾತರ ನಿರ್ದೇಶನಾಲಯವು ಕೈಗೊಂಡ ಕ್ರಮಗಳೇನು; (ಪತ್ರವ್ಯವಹಾರ ಮಾಹಿತಿಯನ್ನು ಒಳಗೊಂಡಂತೆ ವಿವರ ನೀಡುವುದು)

(ಋ) ಈ ಆದೇಶ ಜಾರಿಗೆ ಸದರಿ ನಿರ್ದೇಶನಾಲಯವು ಯಾವುದೇ ಕ್ರಮವಹಿಸಿರದಿದ್ದರೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಸರ್ಕಾರ ಏನಾದರೂ ಕ್ರಮ ಕೈಗೊಳ್ಳಲಿದೆಯೇ?



## ಮೈಸೂರು ಜಿಲ್ಲೆ ಗ್ರಾಮ ಪಂಚಾಯಿತಿಗಳಲ್ಲಿ ನಡೆದಿರುವ ಅವ್ಯವಹಾರ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೫೬ (೧೮೬೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಜಿಲ್ಲೆಯಲ್ಲಿ ಬರುವ ಒಟ್ಟು ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸದರಿ ಜಿಲ್ಲೆಯ ಗ್ರಾಮ ಪಂಚಾಯಿತಿಗಳಿಗೆ ಸರ್ಕಾರ ಕಳೆದ ೩ ವರ್ಷಗಳಿಂದ ಬಿಡುಗಡೆ ಮಾಡಿರುವ ಅನುದಾನವೆಷ್ಟು; ಇದರಲ್ಲಿ ವೆಚ್ಚ ಮಾಡಿರುವ ಅನುದಾನವೆಷ್ಟು ; (ಗ್ರಾಮ ಪಂಚಾಯಿತಿವಾರು ಮಾಹಿತಿ ನೀಡುವುದು)

(ಇ) ಮೈಸೂರು ಜಿಲ್ಲೆಯ ಕೆಲವು ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಕಾಮಗಾರಿಗಳಲ್ಲಿ (ಜಲಾನಯ ಅಭಿವೃದ್ಧಿ ಯೋಜನೆ) ವ್ಯಾಪಕ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಸದರಿ ಯೋಜನೆಯಡಿಯಲ್ಲಿ ಅವ್ಯವಹಾರ ಮಾಡಿರುವ ಅಧಿಕಾರಿ/ನೌಕರರು ಯಾರು; ಇವರುಗಳ ವಿರುದ್ಧ ಸರ್ಕಾರ ಕೈಗೊಂಡ ಶಿಸ್ತಿನ ಕ್ರಮ ಏನು ?

## ಕನ್ನಡ ಸಾಹಿತ್ಯ ಪರಿಷತ್ತಿನ ಶತಮಾನೋತ್ಸವ ಭವನ ನಿರ್ಮಾಣ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೫೭ (೧೮೭೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕನ್ನಡ ಸಾಹಿತ್ಯ ಪರಿಷತ್ತಿನ ಶತಮಾನೋತ್ಸವ ಭವನದ ನಿರ್ಮಾಣಕ್ಕೆ ರಾಜ್ಯ ಸರ್ಕಾರ ಹಣ ಬಿಡುಗಡೆಗೊಂಡು ಜೂನ್ ೧೭, ೨೦೧೪ ರಂದು ಶಂಕುಸ್ಥಾಪನೆ ನೆರವೇರಿಸಿದ್ದರೂ ಕೂಡ ಈವರೆವಿಗೂ ಕಾಮಗಾರಿ ಪ್ರಾರಂಭವಾಗಿಲ್ಲದಿರುವುದಕ್ಕೆ ಕಾರಣವೇನು; ಈ ನಿರ್ಲಕ್ಷ್ಯ ಧೋರಣೆಗೆ ಕಾರಣಕರ್ತರ್‍ಯಾರು; ಕನ್ನಡ ಶತಮಾನೋತ್ಸವ ಭವನ ನಿರ್ಮಾಣದ ಬಗ್ಗೆ ಸರ್ಕಾರದ ನಿಲುವೇನು;

(ಆ) ಕನ್ನಡ ಸಾಹಿತ್ಯ ಪರಿಷತ್ತು ವರ್ಷಕ್ಕೊಂದು ಸಾಹಿತ್ಯ ಸಮ್ಮೇಳನ ನಡೆಸುವುದು ಮಾತ್ರ ಜವಾಬ್ದಾರಿಯೇ; ಭವನ ನಿರ್ಮಾಣಕ್ಕೂ ಕನ್ನಡ ಸಾಹಿತ್ಯ ಪರಿಷತ್ತಿಗೂ ಸಂಬಂಧವಿಲ್ಲವೇ; ನಿರ್ಮಾಣದ ಹೊಣೆ ಹೊತ್ತಿರುವ ಕರ್ನಾಟಕ ವಸತಿ ನಿವರ್ಾಣದ ಜವಾಬ್ದಾರಿ ಏನು ?



## ಕಾನೂನು ಬಾಹಿರವಾಗಿ ಕೊರೆದಿರುವ ಕೊಳವೆ ಬಾವಿಗಳು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೪೫೮ (೧೮೭೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆ ತುರುವೇಕೆರೆ ಕ್ಷೇತ್ರದಲ್ಲಿ ಟಾಸ್ಕ್ ಫೋರ್ಸ್ ಸಮಿತಿಯಲ್ಲಿ ಆಯ್ಕೆಯಾಗದೆ ಕಾನೂನು ಬಾಹಿರವಾಗಿ ಬೋರ್‌ಗಳನ್ನು ಕೊರೆಯಲಾಗಿದೆಯೆ;

(ಆ) ಯಾವ ಯಾವ ಗ್ರಾಮಗಳಲ್ಲಿ ಯಾವ ದಿನಾಂಕದಂದು ಕೊರೆಯಲಾಗಿದೆ;

(ಇ) ಕೊಳವೆ ಬಾವಿ ಕೊರೆದಿರುವ ಏಜೆನ್ಸಿ ಯಾವುದು;

(ಈ) ಯಾವ ಆಧಾರದಲ್ಲಿ ಕೊರೆಯಲಾಗಿದೆ;

(ಉ) ಕಾನೂನು ಬಾಹಿರವಾಗಿ ಕೊರೆಸಿರುವ ಅಧಿಕಾರಿಗಳ ಮೇಲೆ ತೆಗೆದುಕೊಂಡ ಕ್ರಮಗಳೇನು ?

## ಬೆಳಗಾವಿಯ ಅಲರವಾಡ ಗ್ರಾಮಕ್ಕೆ ಮನೆ ನೀಡುವುದು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೪೫೫ (೧೮೭೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿಯ ಅಲರವಾಡ ಗ್ರಾಮದ ಬಡ ಕೂಲಿ ಕಾರ್ಮಿಕ ನೇಕಾರರಿಗೆ ಹಾಳುಬಿದ್ದಿರುವ ೧೨೦ ಮನೆಗಳನ್ನು ನೀಡುವ ಬಗ್ಗೆ ಬೇಡಿಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಅನೇಕ ವರ್ಷಗಳಿಂದ ಹಾಳುಬಿದ್ದಿರುವ ಮನೆಗಳನ್ನು ಮನೆ ಇಲ್ಲದಿರುವ ನಿರಾಶ್ರಿತ ಬಡ ನೇಕಾರರಿಗೆ ಯಾವಾಗ ಮನೆಗಳನ್ನು ಮಂಜೂರು ಮಾಡಲಾಗುವುದು ?

## ಕನ್ನಡ ಸಂಸ್ಕೃತಿ ಇಲಾಖೆಯಿಂದ ಜಾರಿಗೊಂಡ ಕಾರ್ಯಕ್ರಮಗಳು.

**ಶ್ರೀ ಜಿ.ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೬೦ (೧೩೮೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಜಿಲ್ಲೆಯಲ್ಲಿ ಕನ್ನಡ ಸಂಸ್ಕೃತಿ ಇಲಾಖೆಯವತಿಯಿಂದ ಕಳೆದ ಎರಡು ವರ್ಷಗಳಲ್ಲಿ ಜಾರಿಗೊಂಡಿರುವ ಕಾರ್ಯಕ್ರಮಗಳು ಯಾವುವು; (ವಿವರ ಒದಗಿಸುವುದು)



(ಆ) ಕಳೆದ ಎರಡು ವರ್ಷಗಳಲ್ಲಿ ಜಿಲ್ಲೆಯ ಸಾಹಿತಿಗಳು, ಕಲಾವಿದರಿಗೆ ಇಲಾಖೆಯುವತಿಯಿಂದ ಯಾವುದಾದರು ಸವಲತ್ತು ನೀಡಲಾಗಿದೆಯೇ ? (ಮಾಹಿತಿ ಒದಗಿಸುವುದು)

## ಚಿತ್ರದುರ್ಗ– ದಾವಣಗೆರೆ ಜಿಲ್ಲೆಗಳ ಅನಾಥ ಮಕ್ಕಳ ರಕ್ಷಣೆ ಕುರಿತು.

**ಶ್ರೀ ಜಿ.ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೬೧ (೧೩೮೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಅನಾಥ ಮಕ್ಕಳ ರಕ್ಷಣೆಗೆ ಹಾಗೂ ಪೋಷಣೆಗೆ ಇಲಾಖೆ ಕೈಗೊಂಡಿರುವ ಕ್ರಮವೇನು; (ಮಾಹಿತಿ ಒದಗಿಸುವುದು)

(ಆ) ಈ ಎರಡು ಜಿಲ್ಲೆಗಳಲ್ಲಿ ಮಕ್ಕಳ ಹಕ್ಕು ಸಮಿತಿ ಅಸ್ತಿತ್ವದಲ್ಲಿ ಇದೆಯೇ ? (ಮಾಹಿತಿ ಒದಗಿಸುವುದು)

## ಶಾಲೆ ಬಿಟ್ಟ ಮಕ್ಕಳ ಸಮಸ್ಯೆ ಬಗ್ಗೆ.

**ಶ್ರೀ ಜಿ.ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೬೨ (೧೩೯೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಮಕ್ಕಳು ಶಾಲೆಗೆ ಹೋಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಶಾಲೆ ಬಿಟ್ಟ ಮಕ್ಕಳನ್ನು ಪುನಃ ಶಾಲೆಗೆ ಕರೆತಂದು ಶಿಕ್ಷಣ ಒದಗಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು; (ಮಾಹಿತಿ ಒದಗಿಸುವುದು)

(ಇ) ೨೦೧೫–೧೬ನೇ ಸಾಲಿನಲ್ಲಿ ಶಾಲೆ ಬಿಟ್ಟ ಮಕ್ಕಳನ್ನು ಪುನಃ ಶಾಲೆಗೆ ನೋಂದಣಿ ಮಾಡಿಸಿರುವ ಅಂಕಿ ಅಂಶಗಳು ಎಷ್ಟು ? (ಮಾಹಿತಿ ಒದಗಿಸುವುದು)

## ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಶೂನ್ಯ ಫಲಿತಾಂಶ ಪಡೆದ ಶಾಲಾ ಕಾಲೇಜುಗಳು

**ಶ್ರೀ ಎಂ. ಶ್ರೀನಿವಾಸ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೬೩ (೧೩೭೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳ ಅವಧಿಯಲ್ಲಿ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಫಲಿತಾಂಶದಲ್ಲಿ ಶೂನ್ಯ ಸಂಪಾದನೆ ಮತ್ತು ಶೂನ್ಯ



ಸಾಧನೆ ಮಾಡಿದ ಸರ್ಕಾರಿ ಮತ್ತು ಅನುದಾನಿತ ಖಾಸಗಿ ಶಾಲಾ ಕಾಲೇಜುಗಳೆಷ್ಟು; (ಜಿಲ್ಲಾವಾರು, ಶಾಲಾವಾರು, ಕಾಲೇಜುಗಳ ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಇಂತಹ ಶೂನ್ಯ ಸಾಧನೆ ಫಲಿತಾಂಶಕ್ಕೆ ಕಾರಣವಾದ ಅಂಶಗಳನ್ನು ಸರ್ಕಾರವು ಅವಲೋಕಿಸಿದೆಯೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ವಿದ್ಯಾರ್ಥಿ–ಶಿಕ್ಷಕರು–ಪೋಷಕರ ಕುರಿತಾಗಿ ಕಂಡುಕೊಂಡ ಅಂಶಗಳು ಮತ್ತು ಕೈಗೊಂಡ ಶಿಸ್ತು ಕ್ರಮಗಳು ಏನು; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ಒದಗಿಸುವ ಸಲುವಾಗಿ ಶಿಕ್ಷಕರಿಗೆ ಪ್ರಸ್ತುತ ದಿನಮಾನದ ಪಠ್ಯ ಬೋಧನೆಯ ಕೌಶಲ್ಯ ಹೆಚ್ಚಿಸುವ ದೃಷ್ಟಿಯಿಂದ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಅಂತರಸಂತೆ ಗ್ರಾಮದ ಕಬಿನಿ ಹಿನ್ನೀರಿನ ರಸ್ತೆಯ ಅಭಿವೃದ್ಧಿ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೬೪ (೧೩೮೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ಹೆಗ್ಗಡೆದೇವನ ಕೋಟೆ ತಾಲ್ಲೂಕು ಅಂತರಸಂತೆ ಗ್ರಾಮ ಹಾಗೂ ಸುತ್ತಮುತ್ತಲ ಹಳ್ಳಿಗಳ ಜಾನುವಾರುಗಳನ್ನು ಕಬಿನಿ ಹಿನ್ನೀರಿನ

ಪ್ರದೇಶಕ್ಕೆ ಮೇಯಿಸಲು ಕೊಂಡೊಯ್ಯುವ ರಸ್ತೆ ಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಅಂತರಸಂತೆ ಮುಸ್ಲಿಂ ಬ್ಲಾಕ್‌ನಿಂದ ಹಿನ್ನೀರಿನವರೆಗಿರುವ ರಸ್ತೆಯನ್ನು ಅಭಿವೃದ್ಧಿ ಪಡಿಸಿ ಸಿಮೆಂಟ್ ರಸ್ತೆಯನ್ನಾಗಿ ಮಾಡಲು ಕ್ರಮ ಜರುಗಿಸಲಾಗುವುದೇ ?

## ವಸತಿ ಗೃಹಗಳ ನಿರ್ಮಾಣ ಹಾಗೂ ಹಂಚಿಕೆ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು):–**

೧೪೬೫ (೧೩೪೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಿಂದ ವಸತಿ ಇಲಾಖೆಯಿಂದ ನಿರ್ಮಾಣ ಮಾಡಿರುವ ವಸತಿ ಗೃಹಗಳ ಸಂಖ್ಯೆ ಎಷ್ಟು; ಸದರಿ ವಸತಿ ಗೃಹಗಳ ನಿರ್ಮಾಣಕ್ಕೆ ವೆಚ್ಚವಾಗಿರುವ ಹಣ ಎಷ್ಟು; (ವಿವರ ನೀಡುವುದು)

ಆ) ಆ ಪೈಕಿ ಹಂಚಿಕೆ ಮಾಡಲಾಗಿರುವ ವಸತಿ ಗೃಹಗಳ ಸಂಖ್ಯೆ ಎಷ್ಟು; ಹಂಚಿಕೆ ಮಾಡಲು ಬಾಕಿ ಇರುವ ವಸತಿ ಗೃಹಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)



## ರಾಜ್ಯದಲ್ಲಿ ಸರ್ಕಾರಿ/ಅನುದಾನಿತ ಪ್ರಥಮ ದರ್ಜೆ ಮತ್ತು ಸ್ನಾತಕೋತ್ತರ ಕಾಲೇಜುಗಳ ವಿವರ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೪೬೬ (೧೮೫೫)ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ಕರ್ನಾಟಕ ರಾಜ್ಯದಲ್ಲಿ ಸರ್ಕಾರಿ ಅನುದಾನಿತ ಪ್ರಥಮ ದರ್ಜೆ ಮತ್ತು ಸ್ನಾತಕೋತ್ತರ ಕಾಲೇಜುಗಳ ಸಂಖ್ಯೆ ಎಷ್ಟು; ಪ್ರಥಮ ದರ್ಜೆ ಯಾವ ಯಾವ ಕಾಲೇಜುಗಳಲ್ಲಿ ಸಂಶೋಧನೆ ನಡೆಯುತ್ತಿದೆ;

ಆ) ಕರ್ನಾಟಕ ರಾಜ್ಯದಲ್ಲಿ ಜನವರಿ ೨೦೧೪ ರಿಂದ ಮೇ ೨೦೧೫ರವರೆಗೆ ವಿಶ್ವವಿದ್ಯಾನಿಲಯಗಳಲ್ಲಿ ಎಷ್ಟು ಅಭ್ಯರ್ಥಿಗಳಿಗೆ ಗೌರವ ಡಾಕ್ಟರೇಟ್ ಪದವಿ ನೀಡಲಾಗಿದೆ; ಯಾವ ಕ್ಷೇತ್ರಗಳ ಸಾಧನೆಗಳಿಗೆ ನೀಡಲಾಗಿದೆ; (ವಿವರ ನೀಡುವುದು)

ಇ) ಗೌರವ ಡಾಕ್ಟರೇಟ್ ನೀಡಲು ವಿಶ್ವವಿದ್ಯಾನಿಲಯಗಳಿಗೆ ಯಾವ ನಿಯಮಗಳಿವೆ; ಯಾವ ಮಾನದಂಡನೆಯಲ್ಲಿ ನೀಡಲಾಗುವುದು;

ಈ) ರಾಜ್ಯದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## ಮಂಗಳೂರು ವಿಮಾನ ನಿಲ್ದಾಣದಲ್ಲಿ ಕಾರ್ಗೋ ವಿಲೇವಾರಿ ಸೌಕರ್ಯ ಬಗ್ಗೆ.

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೪೬೭(೨೦೬೦) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ಮಂಗಳೂರು ವಿಮಾನ ನಿಲ್ದಾಣದಲ್ಲಿ ಕಾರ್ಗೋ ವಿಲೇವಾರಿ ಸೌಕರ್ಯ ಪ್ರಪಂಚದ ಯಾವ ಯಾವ ದೇಶಗಳಿಗೆ ಸಾಗಿಸಲು ಅವಕಾಶ ಕಲ್ಪಿಸಲಾಗಿದೆ; ಪ್ರಸ್ತುತ ಮಂಗಳೂರಿನಿಂದ ಎಷ್ಟು ಟನ್ ಕಾರ್ಗೋ ಕಳುಹಿಸಲಾಗುವುದು; ಇದರಿಂದ ಬರುವ ಆದಾಯ ಎಷ್ಟು;

ಆ) ಮಂಗಳೂರಿನ ಉತ್ಪಾದನೆಗಳು ತರಕಾರಿ, ಮಲ್ಲಿಗೆ ಹೂ, ಮಾವು ಮುಂತಾದ ಉತ್ಪನ್ನಗಳನ್ನು ಆಮದು ಮಾಡಲು ಇಲಾಖೆ ಕೈಗೊಳ್ಳುವ ಯೋಜನೆಗಳಾವುವು;

ಇ) ಮಂಗಳೂರಿನಿಂದ ಪ್ರಪಂಚದ ಇತರ ಪ್ರವಾಸೋದ್ಯಮ ರಾಷ್ಟ್ರಗಳಿಗೆ ವಿಮಾನ ಹಾರಾಟವನ್ನು ಪ್ರಾರಂಭಿಸಬೇಕೆಂದು ಬೇಡಿಕೆಯ ವಿಮಾನಯಾನ ಇಲಾಖೆ ಸ್ಪಂಧಿಸದೇ ಇರಲು ಕಾರಣಗಳೇನು;

ಈ) ಮಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಕೊಲ್ಲಿ ರಾಷ್ಟ್ರಗಳಿಗೆ ವಿಮಾನಯಾನ ನಡೆಸುತ್ತಿರುವ ಏರ್ ಇಂಡಿಯಾ ಲಾಭ/ನಷ್ಟಗಳ ಬಗ್ಗೆ ವಿವರ ನೀಡುವುದು ?



## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗುಡಿಸಲುಗಳಲ್ಲಿ ವಾಸಿಸುತ್ತಿರುವ ಮನೆಗಳ ಬಗ್ಗೆ.

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೪೬೮(೨೦೬೧)ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗುಡಿಸಲಿನಲ್ಲಿ ವಾಸಿಸುತ್ತಿರುವ ಮನೆಗಳ ಸಂಖ್ಯೆ ಎಷ್ಟು; ಗುಡಿಸಲು ಮುಕ್ತ ಮನೆಗಳ ರಚನೆಗೆ ಇಲಾಖೆ ಕೈಗೊಂಡಿರುವ ಕ್ರಮಗಳೇನು;

ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶೌಚಾಲಯಗಳಿಲ್ಲದ ಮನೆಗಳು ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಿದ್ಯುತ್ ಸಂಪರ್ಕ ಇಲ್ಲದ ಕುಟುಂಬಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಗ್ರಾಮಗಳಲ್ಲಿ ನೀರಿನ ಸೌಕರ್ಯಗಳನ್ನು ಪೂರೈಸಲಾಗಿದೆ; ಯಾವ ಯೋಜನೆ ಅನ್ವಯ ನೀರಿನ ಸೌಕರ್ಯ ಒದಗಿಸಿಕೊಡಲಾಗಿದೆ;

ಉ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪರಿಶಿಷ್ಟ ವರ್ಗಗಳ ಕುಟುಂಬಗಳ ಸಂಖ್ಯೆ ಎಷ್ಟು; ಈ ಎಲ್ಲಾ ಕುಟುಂಬಗಳಿಗೆ ಮನೆ ನಿವೇಶನ ಒದಗಿಸಲಾಗಿದೆಯೇ; ಒಟ್ಟು ಜನಸಂಖ್ಯೆ ಎಷ್ಟು ? (ವಿವರ ನೀಡುವುದು)

## ಮಂಗಳೂರು ರೈಲ್ವೆ ನಿಲ್ದಾಣದಲ್ಲಿ ಕನ್ನಡ ಭಾಷೆಯಲ್ಲಿ ನಾಮಫಲಕಗಳನ್ನು ಅಳವಡಿಸುವ ಬಗ್ಗೆ.

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೪೬೯(೨೦೫೯)ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ಮಂಗಳೂರು ರೈಲ್ವೆ ನಿಲ್ದಾಣದಲ್ಲಿ ಕನ್ನಡ ಭಾಷೆಯಲ್ಲಿ ನಾಮಫಲಕಗಳನ್ನು ಅಳವಡಿಸದೆ ಇರಲು ಮತ್ತು ಕನ್ನಡ ಭಾಷೆ ಬಲ್ಲವರನ್ನು ನೇಮಿಸದೆ ಇದ್ದುದರಿಂದ ಕನ್ನಡಿಗರಿಗೆ ಉಂಟಾದ ತೊಂದರೆ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ;

(ಆ) ಮಂಗಳೂರು ರೈಲ್ವೆ ನಿಲ್ದಾಣಗಳಲ್ಲಿ ರೈಲ್ವೆ ಟಿಕೆಟ್‌ಗಳು ಖರೀದಿಸಲು ಕನ್ನಡ ಭಾಷೆಗರು ಇಲ್ಲದೆ ಪ್ರಯಾಣಿಕರಿಗೆ ತೊಂದರೆ ಉಂಟಾಗುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ;

(ಇ) ರೈಲ್ವೆ ನಿಲ್ದಾಣಗಳಲ್ಲಿ ಟಿಕೆಟ್ ಖರೀದಿಸಲು ಅನುಕೂಲವಾಗುವಂತೆ ಇತರ ಜಿಲ್ಲೆಗಳಲ್ಲಿದ್ದಂತೆ, ಜಿಲ್ಲಾಧಿಕಾರಿಗಳ ಕಛೇರಿಗಳಲ್ಲಿ ಟಿಕೆಟ್ ಕೌಂಟರ್‌ಗಳನ್ನು ಸ್ಥಾಪಿಸಲು ಇಲಾಖೆಯ ಕ್ರಮ ಕೈಗೊಳ್ಳುವುದೆ ;

(ಈ) ಕರ್ನಾಟಕ ರಾಜ್ಯದಲ್ಲಿ ರೈಲ್ವೆ ಇಲಾಖೆಗಳಿಂದ ಮಂಜೂರು ಮಾಡಲ್ಪಟ್ಟ ಯೋಜನೆಗಳು ಕಾರ್ಯಗತಗೊಳ್ಳದೆ ಇರುವ ಇಲಾಖೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)



## ಕರ್ನಾಟಕ ರಾಜ್ಯದಲ್ಲಿ ಸರ್ಕಾರಿ/ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೪೭೦(೨೦೫೮)ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ಕರ್ನಾಟಕ ರಾಜ್ಯದಲ್ಲಿ ಸರ್ಕಾರಿ/ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ವಿದ್ಯಾಭ್ಯಾಸ ಪಡೆಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

ಆ) ೨೦೧೪–೧೫ನೇ ಸಾಲಿನಲ್ಲಿ ಉತ್ತೀರ್ಣ ಮತ್ತು ಅನುತ್ತೀರ್ಣಗೊಂಡ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಕಡಿಮೆ ಫಲಿತಾಂಶಗಳಿಸುವ ಜಿಲ್ಲೆಗಳಲ್ಲಿ ಶಿಕ್ಷಣದ ಗುಣಮಟ್ಟ ಹೆಚ್ಚಿಸಲು ಇಲಾಖೆ ಕೈಗೊಂಡ ಕಾರ್ಯಕ್ರಮಗಳೇನು;

ಇ) ಅನುದಾನಿತ ಶಾಲೆಗಳ ಶಿಕ್ಷಕರು, ಸರ್ಕಾರಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೂ ಸೌಲಭ್ಯಗಳಲ್ಲಿ ತಾರತಮ್ಯ ಮಾಡುತ್ತಿರುವುದಕ್ಕೆ ಕಾರಣಗಳೇನು ? (ವಿವರ ನೀಡುವುದು)

ಈ) ರಾಜ್ಯದಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವಾಗ ಕ್ರಮ ಕೈಗೊಳ್ಳುವುದು; ಇದರಿಂದ ಇಲಾಖೆಗೆ ಬೇಕಾಗಿರುವ ಅನುದಾನವೆಷ್ಟು;

ಉ) ರಾಜ್ಯದಲ್ಲಿ ಶೇಕಡಾ ೧೦ಕ್ಕಿಂತ ಕಡಿಮೆ ಫಲಿತಾಂಶ ಪಡೆದ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

ಊ) ಕನ್ನಡ ಮಾಧ್ಯಮ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗುತ್ತಿರುವುದಕ್ಕೆ ಕಾರಣಗಳೇನು; ಹೆಚ್ಚಿಸಲು ಇಲಾಖೆಯ ಮುಂದೆ ಇರುವ ಯೋಜನೆಗಳಾವುವು ?

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ–2, ಬೆಂ–59/ಕಾ.ಸೂ. 3584/700 ಪ್ರತಿಗಳು/14–07–2015